# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 174 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 24–01–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 01 Issue - 174 | Title- Code: KARKAN 28269 | Chitradurga | Date: 24-01-2024 Wednesday | Page: 4 | Price: Rs. 2-00

**ಒಳಪುಟದ ಸುದ್ದಿಗಳು**

ಜಿಲ್ಲೆಯಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮುಖ್ಯವಾಹಿನಿಗೆ ಕರೆ ತನ್ನಿ 2

ಕರ್ನಾಟಕ ಗಣಿ, ಭೂ ವಿಜ್ಞಾನ ಇಲಾಖೆ ದೇಶದಲ್ಲಿಯೇ 3ನೇ ಸ್ಥಾನ 3

ಮಹಿಳೆಗೆ ಸಂಘರ್ಷವಿಲ್ಲದ ಬದುಕಿಲ್ಲ, ಆದರೂ ಎಲ್ಲಾ ಕ್ಷೇತ್ರಗಳಲ್ಲಿ ಮುಂಚೂಣಿ 4

ಸುದ್ದಿ, ಜಾಹಿರಾತಿಗೆ 9686622252

**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಕೋಟೆ ನಾಡಿನಲ್ಲಿ ಬಂದ್‌ಗೆ ಅಭೂತಪೂರ್ವ ಜನಬೆಂಬಲ
# ಭದ್ರೆಗಾಗಿ ಚಿತ್ರದುರ್ಗ ಬಂದ್ ಯಶಸ್ವಿ

» ನಮ್ಮ ಜನ ಸಮಾಚಾರ

ಚಿತ್ರದುರ್ಗ: ಭದ್ರಾ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಚಿತ್ರದುರ್ಗ ಬಂದ್ ಗೆ ಕರೆ ನೀಡಿರುವ ಹಿನ್ನಲೆ ಚಿತ್ರದುರ್ಗ ಬಂದ್ ಗೆ ವ್ಯಾಪಕ ಬೆಂಬಲ ಸಿಕಿದೆ.ನಗರದ ಗಾಂಧಿ ವೃತ್ತದ ಬಳಿ ಬೆಳ್ಳಂ ಬೆಳಗಿಂದಲೇ ಅನೇಕ ಸಂಘಟನೆಗಳು ಭಾಗಿಯಾಗಿ ಬಂದ್ ಗೆ ಬೆಂಬಲ ಸೂಚಿಸಿದ್ದಾರೆ.

ನಗರದ ಬಿಡಿ ರಸ್ತೆಯಲ್ಲಿರುವ ಅಂಗಡಿ ಮುಂಗಟ್ಟುಗಳ ಮಾಲೀಕರು, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕ ಚಿತ್ರದುರ್ಗ,

ಖಾಸಗಿ ಬಸ್ ಮಾಲೀಕರ ಸಂಘ,ಕರ್ನಾಟಕ ಕಾರ್ಯನಿರತ ದಿನಪತ್ರಿಕೆ ಗಳ ಹಂಚಿಕೆದಾರರು ಮತ್ತು ವಿತರಕರ ಸಂಘ,ಆಟೋ ಚಾಲಕರ ಸಂಘ, ಹೋಟೆಲ್ ಮಾಲೀಕರ ಸಂಘ,ಬೀದಿಬದಿ ವ್ಯಾಪಾರಿಗಳ ಸಂಘ, ವಿದ್ಯಾರ್ಥಿಗಳ ಸಂಘಟನೆ, ಮಹಿಳಾ ಸಂಘಟನೆ, ವಕೀಲರು ಸಂಘ, ದಲಿತ ಸಂಘಟನೆಗಳು, ಹೂ ಬೆಳೆಗಾರರು ಸಂಘ, ತರಕಾರಿ ಮತ್ತು ಹಣ್ಣು ಮಾರಾಟಗಾರರ ಸಂಘ, ವಿಜಯ ಸೇನೆ ಸಂಘಟನೆ,ಕರ್ನಾಟಕ ರಕ್ಷಣಾ ವೇದಿಕೆ, ಕಟ್ಟಡ ಹಾಗೂ ಇತರೆ ನಿರ್ಮಾಣ ಸಂಘಟನೆ, ಕಾರ್ಮಿಕರ ಸಂಘಟನೆ,ಭಾರತ ಕಮ್ಯುನಿಸ್ಟ್ ಪಕ್ಷ ಕರ್ನಾಟಕ ಕೊಳಗೇರಿ ನಿವಾಸಿಗಳ ಸಂಘಟನೆ ಇತರೆ ಸಂಘಟನೆಗಳು ಸೇರಿಕೊಂಡು ಎಂದು ಚಿತ್ರದುರ್ಗ ನಗರವನ್ನು ಸ್ವಯಂ ಪ್ರೇರಿತರಾಗಿ ಬಂದ್ ಮಾಡಿ ಚಿತ್ರದುರ್ಗ ಬಂದ್ ಗೆ ಬೆಂಬಲಿಸಿದ್ದಾರೆ.

ರೈತ ಮುಖಂಡರು ರಾಜ್ಯ ಮತ್ತು ಕೇಂದ್ರ ಸರ್ಕಾರದ ವಿರುದ್ಧ ವಿರುದ್ಧ ಘೋಷಣೆಗಳನ್ನು ಕೂಗುವುದರ ಮೂಲಕ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿದ್ದಾರೆ ಮಧ್ಯ ಕರ್ನಾಟಕದ ಬಯಲು ಸೀಮೆ ಪ್ರದೇಶಗಳಿಗೆ ನೀರುಣಿಸುವ ಮಹತ್ವದ ಭದ್ರ ಮೇಲ್ದಂಡೆ ಯೋಜನೆ ಕಾಮಗಾರಿ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ನಿರ್ಲಕ್ಷದಿಂದಾಗಿ ಕುಂಠಿತವಾಗಿದೆ 25 ವರ್ಷಗಳಾಗುತ್ತಾ ಬಂದಿದ್ದರು ಸಹ ಕಾಮಗಾರಿ ಮಾತ್ರ ಪೂರ್ಣಗೊಂಡಿಲ್ಲ,

ಕಳೆದ ಎಂಟು ವರ್ಷಗಳಿಂದ ಒಂದೂವರೆ ಕಿಲೋಮೀಟರ್ ಭೂ ಸ್ವಧೀನಾ ಮಾಡಿಕೊಳ್ಳಲು ಸಾಧ್ಯವೇ ಆಗದಂತಹ ಪರಿಸ್ಥಿತಿ ಸರ್ಕಾರಕ್ಕೆ ಬಂದೊಡ್ಡಿದೆ.ಎತ್ತಿನಹೊಳೆ ಯೋಜನೆಗೆ ದುಡ್ಡು ಸುರಿಯುತ್ತಿರುವ ರಾಜ್ಯ ಸರ್ಕಾರ ಭದ್ರಾ ಮೇಲ್ದಂಡೆ ಯೋಜನೆಗೆ ಉದಾಸೀನ ತೋರುತ್ತಿದೆ. ನೀರು ಹರಿಸುವ ಯೋಜನೆಗಳನ್ನು ಸರ್ಕಾರಗಳು ಮಲತಾಯಿ ಧೋರಣೆ ಅನುಸರಿಸುತ್ತಿದ್ದಾರೆ ಎಂದು ರೈತರು ಗುಡುಗಿದ್ದಾರೆ.ವಿಧಾನಸಭಾ ಚುನಾವಣೆ ವೇಳೆ ಚಿತ್ರದುರ್ಗಕ್ಕೆ ಆಗಮಿಸಿದ್ದ ಪ್ರಧಾನಿ ನರೇಂದ್ರ ಮೋದಿ ಭದ್ರಾ ಮೇಲ್ದಂಡೆ ರಾಷ್ಟ್ರೀಯ ಯೋಜನೆಯಾಗಿ ಘೋಷಿಸಿ 5300 ಕೋಟಿಗಳ ಅನುದಾನ ಒದಗಿಸುವುದಾಗಿ ಪ್ರಮಾಣ ಮಾಡಿದ್ದರು. ಇದುವರೆಗೂ ಅದು ಈಡೇರಿಲ್ಲ ದೇಶದ ಪ್ರಜಾಪ್ರಭುತ್ವ ವಾರಸುದಾರಿಕೆ ಹೊಂದಿರುವ ಪ್ರಧಾನಿಯವರೇ ಮಾತು ತಪ್ಪಿದರೆ ಹೇಗೆ ಎಂಬುದು ಪ್ರಶ್ನೆಯಾಗಿದೆ ಎಂದು ರೈತರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮುಂದಿನ ಬಜೆಟ್ ನಲ್ಲಿ ಜಲಸಂಪನ್ಮೂಲ ಇಲಾಖೆಗೆ ಮೀಸಲಿಡಿರುವ ಅನುದಾನದಲ್ಲಿ ಮೇಲ್ದಂಡೆಗೆ ವಿನಿಯೋಗ ಮಾಡಬೇಕೆಂದು ಪ್ರತಿಭಟನಾಕಾರರು ಆಗ್ರಹಿಸಿದ್ದಾರೆ.ಬೆಳಗಿನಿಂದಲೇ ನಡೆದ ಚಿತ್ರದುರ್ಗ ಬಂದ್ ಬೆಂಬಲಕ್ಕೆ ವಿವಿಧ ಸಂಘಟನೆಗಳು ಕೂಡ ಬೆಂಬಲ ನೀಡಿದ್ದರು, ಈ ಒಂದು ಬಂದ್ ನಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಚಿತ್ರದುರ್ಗದ ಪೊಲೀಸ್ ಇಲಾಖೆ ಕಾರ್ಯನಿರ್ವಹಿಸಿದೆ.

## ಹೋರಾಟ ಸಮಿತಿಯ ಪ್ರಮುಖ ಬೇಡಿಕೆಗಳು

1 ಭದ್ರಾ ಮೇಲ್ದಂಡೆ ಕಾಮಗಾರಿಗೆ ತೊಡಕಾಗಿರುವ ಭೂ ಸ್ವಾಧೀನ ಪ್ರಕ್ರಿಯೆ ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕು.

2 ಚಳ್ಳಕೆರೆ, ಮೊಳಕಾಲ್ಮುರು, ಜಗಳೂರು ಪ್ರದೇಶದ ಕಾಮಗಾರಿಗಳ ಕೈಗೆತ್ತಿಕೊಂಡು ಪೂರ್ಣಗೊಳಿಸಬೇಕು

3 ಹೊಳಲ್ಕೆರೆ ತಾಲೂಕಿನ ಕೆರೆಗಳ ತುಂಬಿಸಲು ಮುಂಬರುವ ಮಳೆಗಾಲದಲ್ಲಿಯೇ ಅಗತ್ಯ ಕ್ರಮ ಕೈಗೊಳ್ಳಬೇಕು.

4 ಟೆಂಡರ್ ಕರೆದು ಹನಿ ನೀರಾವರಿ ಕಾಮಗಾರಿಗಳ ಆರಂಭಿಸಬೇಕು.

5 ಮುಂದಿನ ರಾಜ್ಯ ಸರ್ಕಾರದ ಬಜೆಟ್ ನಲ್ಲಿ ಜಲ ಸಂಪನ್ಮೂಲ ಇಲಾಖೆಗೆ ನಿಗಧಿಗೊಳಿಸಲಾದ ಅನುದಾನದಲ್ಲಿ ಸಿಂಹಪಾಲು ಭದ್ರಾ ಮೇಲ್ದಂಡೆಗೆ ವಿನಿಯೋಗಿಸಬೇಕು.



### ಕೇಂದ್ರ ಸರ್ಕಾರ ಘೋಷಣೆ ಮಾಡಿದಂತೆ
## ಭದ್ರಾಗೆ 5300 ಕೋಟಿ ಬಿಡುಗಡೆ ಮಾಡಲಿ: ಶಾಸಕ ಟಿ.ರಘುಮೂರ್ತಿ

» ನಮ್ಮಜನ ಸಮಾಚಾರ



ಚಿತ್ರದುರ್ಗ: ಮಧ್ಯ ಕರ್ನಾಟಕದ ಬಯಲು ಸೀಮೆಯ ಪ್ರದೇಶಗಳಿಗೆ ನೀರೊದಗಿಸುವ ಮಹತ್ವದ ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ರಾಷ್ಟ್ರೀಯ ಯೋಜನೆ ಎಂದು ಘೋಷಿಸಿ 5300 ಕೋಟಿ ಹಣ ಒದಗಿಸುವುದಾಗಿ ಭರವಸೆ ನೀಡಿದ್ದ ಕೇಂದ್ರ ಸರ್ಕಾರ ಇನ್ನು ಒಂದು ಪೈಸೆ ಹಣ ನೀಡಿಲ್ಲ. ಈ ಕೂಡಲೇ ಎಚ್ಚೆತ್ತುಕೊಂಡ ಅನುದಾನ ಬಿಡುಗಡೆ ಮಾಡಬೇಕು ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಕೇಂದ್ರ ಸರ್ಕಾರಕ್ಕೆ ಒತ್ತಾಯಿಸಿದರು.

ಇಂದು ಜಿಲ್ಲಾ ನೀರಾವರಿ ಅನುಷ್ಠಾನ ಹೋರಟ ಸಮಿತಿ ಹಮ್ಮಿಕೊಂಡಿದ್ದ ಚಿತ್ರದುರ್ಗ ಬಂದ್ ಗೆ ಬೆಂಬಲ ಸೂಚಿಸುವ ಜೊತೆಗೆ ಭಾಗವಹಿಸಿ ಮಾತನಾಡಿ ಕೇಂದ್ರ ಸರ್ಕಾರ ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆ ವ್ಯಾಪ್ತಿಗೆ ಪಡೆದು ಹಲವು ವರ್ಷ ಕಳೆದರು ಸಹ ಯಾವುದೇ ಹಣ ಬಿಡುಗಡೆ ಮಾಡಿಲ್ಲ. ಅಭಿವೃದ್ಧಿ ವಿಚಾರದಲ್ಲಿ ರಾಜಕರಣ ಮಾಡಬಾರದು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಮಗೆ ಭದ್ರಾ ಯೋಜನೆ ತ್ವರಿತ ಕಾಮಗಾರಿಗೆ ಹಣ ಒದಗಿಸಬೇಕು. ಭದ್ರಾ ಹೋರಟ ಚಿತ್ರದುರ್ಗ, ದಾವಣಗೆರೆ, ತುಮಕೂರು, ಚಿಕ್ಕ ಮಂಗಳೂರು ಜಿಲ್ಲೆಗೆ ಭದ್ರಾ ಯೋಜನೆ ಅನುಕೂಲ ಪಡೆಯಲಿವೆ. ನಾಲ್ಕು ಜಿಲ್ಲೆ 12 ತಾಲೂಕು 367 ಕೆರೆ ತುಂಬಿಸುವ ಯೋಜನೆಯಾಗಿದೆ.

2022 ರಲ್ಲಿ 21647 ಕೋಟಿಗೆ ಪರಿಷ್ಕೃತಗೊಳಿಸಿ ರಾಷ್ಟ್ರೀಯ ಯೋಜನೆ ಮಾಡಬೇಕು ಎಂದು ಕೇಂದ್ರ ಸರ್ಕಾರಕ್ಕೆ ರಾಜ್ಯ ಬಿಜೆಪಿ ಸರ್ಕಾರ 2023 ರಲ್ಲಿ ಕೇಂದ್ರಕ್ಕೆ ಕಳಿಸಿ ಅಗತ್ಯವಾದ ಎಲ್ಲಾ ಮಾಹಿತಿ ರಾಜ್ಯ ಸರ್ಕಾರ ನೀಡಿದೆ ಎಂದರು.

ಕೇಂದ್ರ ಸರ್ಕಾರ 16500 ಕೋಟಿಗೆ ಈ ಯೋಜನೆ ಮೊತ್ತ ನಿಗದಿ ಮಾಡಲಾಯಿತು. ಹನಿ ನೀರಾವರಿಗೆ ಯೋಜನೆ ಒಳಪಡಿಸಿ ರಾಷ್ಟ್ರೀಯ ಯೋಜನೆ ಎಂದು ಘೋಷಿಸಿ ರಾಜ್ಯದ ಪಾಲು 60% ಮತ್ತು ಕೇಂದ್ರ ಪಾಲು 40 % ನಂತೆ ನಿಗದಿ ಮಾಡಿದರು. 5300 ಕೋಟಿ ನಿಗದಿ ಮಾಡಿ ರಾಷ್ಟ್ರೀಯ ಯೋಜನೆ ಎಂದು ಘೋಷಿಸಿದರು ಒಂದು ಪೈಸೆ ಬಿಡುಗಡೆ ಮಾಡಿಲ್ಲ ಎಂದು ಕೇಂದ್ರ ಸರ್ಕಾರದ ಗುಡುಗಿದರು.

ಹೊಸ ಸರ್ಕಾರ ಬಂದ ನಂತರ ಕೇಂದ್ರ ಸರ್ಕಾರ ಕೇಳಿದ ಎಲ್ಲಾ ಮಾಹಿತೊ ನೀಡಿದರು ಹಣ ನೀಡಲು ಮನಸ್ಸು ಮಾಡಿಲ್ಲ. ಇಲ್ಲಿಯವರೆಗೂ ಸಹ ಎಂಟು ಸಾವಿರ ಕೋಟಿ ಹಣ ಭದ್ರಾ ಮೇಲ್ದಂಡೆ ಯೋಜನೆಗೆ ವ್ಯಯ ಮಾಡಿದ್ದು ಅದರಲ್ಲಿ 1700 ಕೋಟಿ ಮಾಡಿರುವ ಕಾಮಗಾರಿ ವೆಚ್ಚ ಸರ್ಕಾರ ನೀಡಬೇಕಿದೆ. ನಮ್ಮ ಸರ್ಕಾರ ಬಂದ ಮೇಲೆ 1200 ಕೋಟಿ ಹಣ ಬಿಡುಗಡೆ ಮಾಡಿದೆ. ಕೇಂದ್ರ ಸರ್ಕಾರ 5300 ಕೋಟಿ ಹಣ ಬಿಡುಗಡೆ ಮಾಡದಿದ್ದ ಕಾರಣದಿಂದ ಯೋಜನೆ ಕುಂಠಿತವಾಗಿದೆ ಎಂದು ನೇರವಾಗಿ ಕೇಂದ್ರ ಸರ್ಕಾರ ವಿರುದ್ದ ಹರಿಹಾಯ್ದರು.

ಕೇಂದ್ರ ಸರ್ಕಾರ 21500 ಕೋಟಿಯನ್ನು ಕಡಿಮೆ ಮಾಡದೇ ಹನಿನೀರಾವರಿ ಯೋಜನೆ ಮಾಡಬೇಕು. ಚಿತ್ರದುರ್ಗ ಜಿಲ್ಲೆಗೆ ಯಾವ ನೀರಾವರಿ ಯೋಜನೆ ಇಲ್ಲ.16500 ಕೋಟಿ ಅನುದಾನ ಕಡಿತಗೊಳಿಸಬೇಡಿ ಎಂದು ನಮ್ಮ ಜಿಲ್ಲೆಯ ಸಚಿವರು ಮತ್ತು ಶಾಸಕರು ಸಭೆಯಲ್ಲಿ ಸಿಎಂ ,ಡಿಸಿಎಂ ಅವರ ಗಮನಕ್ಕೆ ಎಲ್ಲಾ ಮಾಹಿತಿ ನೀಡಿದ್ದು ನೂರಕ್ಕೆ ನೂರರಷ್ಟು ನಮ್ಮ ಸರ್ಕಾರ ಅನುದಾನ ಒದಗಿಸಲು ಬದ್ದವಾಗಿದೆ.ಬಜೆಟ್ ಸಂದರ್ಭದಲ್ಲಿ ಸಹ ನಾವು ಸಿಎಂ ಬಳಿ ಮತ್ತೆ ಮನವಿ ಮಾಡುತ್ತೇವೆ ಮತ್ತು 2025 ನೀರಾವರಿ ಯೋಜನೆ ಎಂದು ಘೋಷಣೆ ಮಾಡಿದ್ದು ಹೆಚ್ಚಿನ ಹಣಕ್ಕೆ ಬೇಡಿಕೆ ಸಲ್ಲಿಸುತ್ತೇವೆ. ಇದೇ ವರ್ಷ ಅಕ್ಟೋಬರ್ 2 ಕ್ಕೆ ನೀರು ನಮ್ಮ ಜಿಲ್ಲೆಯ ಹರಿಯಲಿದೆ ಮತ್ತು ತರೀಕೆರೆ ಬಳಿ ರೈತರ ಸಮಸ್ಯೆ ಬಗೆಹರಿದಿದ್ದು ಯಾವುದೇ ಅಡ್ಡಿ ಆತಂಕ ಇಲ್ಲ. ಇಲಾಖೆ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಸಹ ಶೀಘ್ರವಾಗಿ ಆಗಮಿಸಲಿದ್ದು ಭದ್ರಾ ಕಾಮಗಾರಿ ಪರಿಶೀಲನೆ ನಡೆಸಲಿದ್ದಾರೆ ಎಂದು ರೈತರಿಗೆ ಅಭಯ ನೀಡಿದರು.






ರೈತರ ಹೋರಟಕ್ಕೆ ನಮ್ಮಬೆಂಬಲವಿದೆ. ಕಾಮಗಾರಿ ಆರಂಭಿಸಲು ಯಾವುದೇ ತೊಂದರೆ ಇಲ್ಲ, ಕಾಮಗಾರಿ ವಿಕ್ಷಣೆಗೆ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಆಗಮಿಸಲಿದ್ದಾರೆ. ತರೀಕೆರೆ ಶಾಸಕರ ಜೊತೆ ಮಾತನಾಡಿದ್ದು ರೈತರಿಂದ ಯಾವುದೇ ಅಡ್ಡಿ ಇಲ್ಲ. ರೈತರು ಆತಂಕಪಡುವ ಅವಶ್ಯಕತೆ ಇಲ್ಲ. ಜಿಲ್ಲೆಯ ಎಲ್ಲಾ ಶಾಸಕರು ಸಿಎಂ ಅವರಿಗೆ ಹೆಚ್ಚಿನ ಅನುದಾನಕ್ಕೆ ಮನವಿ ಸಹ ಮಾಡಿದ್ದೇವೆ ಎಂದರು.

» **ಡಿ.ಸುಧಾಕರ್ ಜಿಲ್ಲಾ ಉಸ್ತುವಾರಿ ಸಚಿವರು. ಚಿತ್ರದುರ್ಗ ಜಿಲ್ಲೆ**

## ಚಿತ್ರದುರ್ಗ ಬಂದ್‌ಗೆ ವಿಶೇಷ ಚೇತನ ಸಾಥ್





ಚಿತ್ರದುರ್ಗದಲ್ಲಿ ವಿಶೇಷ ಚೇತನನೊಬ್ಬ ಭದ್ರಾ ನೀರಿಗಾಗಿ ರಸ್ತೆಗಿಳಿದು ವಿಶಿಷ್ಟವಾಗಿ ಪ್ರತಿಭಟನೆ ನಡೆಸಿದ್ದಾರೆ. ನಗರದ ಗಾಂಧಿ ವೃತ್ತದ ಬಳಿಜಿಲ್ಲಾ ನೀರಾವರಿ ಹೋರಾಟ ಸಮಿತಿಯ ವತಿಯಿಂದ ಭದ್ರಾ ಮೇಲ್ದಂಡೆ ಶೀಘ್ರ ಕಾರ್ಯಾನುಷ್ಟಾನಕ್ಕೆ ಆಗ್ರಹಿಸಿ ಸ್ವಯಂ ಪ್ರೇರಿತ ಚಿತ್ರದುರ್ಗ ಬಂದ್ ಗೆ ಕರೆ ನೀಡಿದ್ದು , ಈ ಒಂದು ಪ್ರತಿಭಟನೆಯಲ್ಲಿ ಹಿರಿಯೂರು ತಾಲ್ಲೂಕಿನ ಯರಬಳ್ಳಿ ಗ್ರಾಮದ ಎಂ.ಶಿವಣ್ಣ ಎಂಬ ವಿಶೇಷ ಚೇತನ ಪ್ರತಿಭಟನೆಗೆ ಬಂದು ಸಾಥ್ ಕೊಟ್ಟಿದ್ದು ಭದ್ರಾ ನೀರಿಗಾಗಿ ತನ್ನ ಬೆಂಬಲ ಸೂಚಿಸಿದ್ದಾರೆ. ಬೆಳಗ್ಗೆಯಿಂದಲೇ ಬಿಸಿಲಿನಲ್ಲಿ ಕೂತ ಎಂ. ಶಿವಣ್ಣ ಖುದ್ದ ರೈತ ಕೂಡ ಆಗಿದ್ದು ಬಿಸಿಲನ್ನು ಸಹ ಲೆಕ್ಕಿಸದೆ ಕಾಲಿಲ್ಲದಿದ್ದರು ಸಹಾ ರಸ್ತೆಯಲ್ಲಿ ಕೂತು ಪ್ರತಿಭಟನೆಗೆ ಸಾಥ್ ನೀಡಿದ್ದಾರೆ.ಈ ಸಂದರ್ಭದಲ್ಲಿ ಜಿಲ್ಲಾ ನೀರಾವರಿ ಅನುಷ್ಠಾನ ಸಮಿತಿ ಅಧ್ಯಕ್ಷ ಲಿಂಗಾರೆಡ್ಡಿ, ನೀರಾವರಿ ಅನುಷ್ಠಾನ ಸಮಿತಿ ಪ್ರಧಾನ ಕಾರ್ಯದರ್ಶಿ ಕೆ.ಆರ್.ದಯಾನಂದ್.

ಪುಟ 2

**ಫಾಸ್ಟ್ ನ್ಯೂಸ್**

## ನೂತನ ಜಿಲ್ಲಾಧಿಕಾರಿ ಆಗಿ ಟಿ.ವೆಂಕಟೇಶ್ ಅಧಿಕಾರ ಸ್ವೀಕಾರ



» ನಮ್ಮ ಜನ ಸಮಾಚಾರ

ಚಿತ್ರದುರ್ಗ: ಚಿತ್ರದುರ್ಗ ಜಿಲ್ಲೆಗೆ ನೂತನವಾಗಿ ಜಿಲ್ಲಾಧಿಕಾರಿಯಾಗಿ ಟಿ.ವೆಂಕಟೇಶ್ ಅಧಿಕಾರ ವಹಿಸಿಕೊಂಡಿದ್ದಾರೆ. ಪ್ರಸ್ತುತ ಜಿಲ್ಲೆಯಲ್ಲಿ ತೀವ್ರ ಬರ ಪರಿಸ್ಥಿತಿ ತಲೆದೋರಿದ್ದು, ಬರ ಪರಿಹಾರ ಕಾರ್ಯಗಳಿಗೆ ಆದ್ಯತೆ ನೀಡಲಾಗುವುದು. ಅಲ್ಲದೆ ಬೇಸಿಗೆಯಲ್ಲಿ ಜನರಿಗೆ ಕುಡಿಯುವ ನೀರಿನ ತೊಂದರೆಯಾಗದಂತೆ ನೋಡಿಕೊಳ್ಳಲು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುವುದು. ಜನರ ಶ್ರೇಯೋಭಿವೃದ್ಧಿಗಾಗಿ ಸರ್ಕಾರ ರೂಪಿಸಿರುವ ಯೋಜನೆಗಳನ್ನು ಅರ್ಹ ಎಲ್ಲ ಫಲಾನುಭವಿಗಳಿಗೆ ತಲುಪಿಸಲು ಆದ್ಯತೆ ನೀಡಲಾಗುವುದು ಎಂದು ನೂತನ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.



ಇಲ್ಲಿವರೆಗೂ ಜಿಲ್ಲಾಧಿಕಾರಿಯಾಗಿದ್ದ ದಿವ್ಯಪ್ರಭು ಜಿ.ಆರ್.ಜೆ. ಅವರನ್ನು ಸರ್ಕಾರ ವರ್ಗಾವಣೆಗೊಳಿಸಿ, ವೆಂಕಟೇಶ್ ಅವರನ್ನು ಜಿಲ್ಲಾಧಿಕಾರಿಯಾಗಿ ನೇಮಕಗೊಳಿಸಿರುವುದರಿಂದ, ಟಿ.ವೆಂಕಟೇಶ್ ಅವರು ಮಂಗಳವಾರದಂದು ಅಧಿಕಾರ ವಹಿಸಿಕೊಂಡರು. ಇನ್ನು ನೂತನ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರಿಗೆ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಹೂಗುಚ್ಛ ನೀಡಿ ಸ್ವಾಗತಿಸಿದರು. 2015ರ ಬ್ಯಾ[illegible]ನ ಐಎಎಸ್ ಅಧಿಕಾರಿ ಆಗಿರುವ ಅವರು ಟಿ.ವೆಂಕಟೇಶ್ ಅವರು, ಈ ಮೊದಲು ಚಿತ್ರದುರ್ಗ ಉಪವಿಭಾಗಾಧಿಕಾರಿಯಾಗಿ, ಹರಪನಹಳ್ಳಿ ಉಪವಿಭಾಗಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲೆ ಅಪರ ಜಿಲ್ಲಾಧಿಕಾರಿ, ಮೈಸೂರು ಜಿಲ್ಲೆ ಅಪರ ಜಿಲ್ಲಾಧಿಕಾರಿ, ರಾಜ್ಯ ಪುರಾತತ್ವ ಇಲಾಖೆ ಆಯುಕ್ತರು, ಕೆಎಸ್‌ಆರ್‌ಟಿಸಿ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ ನಿರ್ದೇಶಕರು ಹಾಗೂ ವಿಜಯನಗರ ಜಿಲ್ಲೆಯ ಜಿಲ್ಲಾಧಿಕಾರಿಗಳಾಗಿ ಸೇವೆ ಸಲ್ಲಿಸಿದ್ದಾರೆ.. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಪ್ರಭಾರ ಉಪವಿಭಾಗಾಧಿಕಾರಿ ವಿವೇಕ್, ಜಿಲ್ಲಾ ಪಂಚಾಯತಿ ಉಪಕಾರ್ಯದರ್ಶಿ ಬಿ.ಆನಂದ್ ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

**ನಾಯಕನಟ್ಟಿ ತಿಪ್ಪೇಶನ ದರ್ಶನ ಪಡೆದ ನೂತನ ಡಿಸಿ:** ನೂತನ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಮುನ್ನ ಚಳ್ಳಕೆರೆ ತಾಲ್ಲೂಕಿನ ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾಗಿರುವ ನಾಯಕನಹಟ್ಟಿಯ ದೇವಾಲಯಕ್ಕೆ ಭೇಟಿ ನೀಡಿ, ಶ್ರೀ ತಿಪ್ಪೇರುದ್ರಸ್ವಾಮಿ ದೇವರ ದರ್ಶನ ಮಾಡಿ, ಆಶೀರ್ವಾದ ಪಡೆದುಕೊಂಡರು. ಬಳಿಕ ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ಆಗಮಿಸಿ, ಅಧಿಕಾರ ವಹಿಸಿಕೊಂಡರು.

## ಇಂದು ವಿದ್ಯುತ್ ವ್ಯತ್ಯಯ

» ಚಿತ್ರದುರ್ಗ

ಚಿತ್ರದುರ್ಗ ವಿಭಾಗ ವ್ಯಾಪ್ತಿಯಲ್ಲಿರುವ 66/11 ಕೆ.ವಿ ಚಿತ್ರದುರ್ಗ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯಕ್ಕಾಗಿ ವಿ.ವಿ ಕೇಂದ್ರಕ್ಕೆ ಮಾರ್ಗ ಮುಕ್ತತೆ ನೀಡಬೇಕಾಗಿರುವುದರಿಂದ ಈ ವಿ.ವಿ ಕೇಂದ್ರದಿಂದ ಸರಬರಾಜಾಗುವ ಎಲ್ಲಾ ಎನ್‌ಜೆವೈ ಮತ್ತು ಕೃಷಿ 11 ಕೆ.ವಿ ಮಾರ್ಗಗಳಲ್ಲಿ ಇದೇ ಜ.24ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 2ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ ಗ್ರಾಹಕರು ಸಹಕರಿಸಬೇಕು ಎಂದು ಬೆಸ್ಕಾಂ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ಕೋರಿದ್ದಾರೆ.

## ಫಾಸ್ಟ್ ನ್ಯೂಸ್

### ಚಿತ್ರದುರ್ಗ ಬಂದ್‌ಗೆ ವಿಶೇಷ ಚೇತನ ಸಾಥ್





» ಮೊದಲ ಪುಟದಿಂದ

ಸಂಚಾಲಕ ಚಿಕ್ಕಪ್ಪನಹಳ್ಳಿ ಷಣ್ಮುಖಪ್ಪ, ಸ್ವರಾಜ್ ಇಂಡಿಯಾ ಪಕ್ಷದ ಜೆ.ಯಾದವ್ ರೆಡ್ಡಿ, ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ದಿನೇಶ್ ಗೌಡಗೆರೆ, ರೈತ ಸಂಘದ ಜಿಲ್ಲಾ ಕಾರ್ಯಾಧ್ಯಕ್ಷ ಕೆ.ಸಿ.ಹೊರಕೇರಪ್ಪ,ತಾಲೂಕು ಅಧ್ಯಕ್ಷ ಹಂಪಯ್ಯನಮಾಳಿಗೆ ಧನಂಜಯ, ಕಟ್ಟಡ ಕಾರ್ಮಿಕರ ಸಂಘದ ವೈ.ಕುಮಾರ್, ಹಮಾಲರ ಸಂಘದ ಅಧ್ಯಕ್ಷ ಬಿ.ಬಸವರಾಜಪ್ಪ, ಸಿಪಿಐ ಜಿಲ್ಲಾ ಕಾರ್ಯದರ್ಶಿ ಸುರೇಶ್ ಬಾಬು,ಎಐಟಿಯುಸಿ ರಾಜಪ್ಪ, ಸತ್ಯಕೀರ್ತಿ, ಜನಶಕ್ತಿ ಸಂಘಟನೆಯ ಪುರೋಷೋತ್ತಮ, ಕರವೇ ಸಂಘಟನೆಯ ಜಿಲ್ಲಾಧ್ಯಕ್ಷರುಗಳಾದ ರಮೇಶ್, ಎಸ್.ಕೆ.ಮಹಂತೇಶ್,ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಶಿವಕುಮಾರ್, ಲಕ್ಷ್ಮಿಕಾಂತ, ಲಿಂಗಾವರಟ್ಟಿ ಇ.ಎನ್.ಲಕ್ಷ್ಮಿಕಾಂತ,ಗುರುಮೂರ್ತಿ, ಕೋನಸಾಗರ ಮಂಜುನಾಥ್.ರೈತ ಸಂಘದ ಉಪಾಧ್ಯಕ್ಷ ಮಲ್ಲಾಪುರ ತಿಪ್ಪೇಸ್ವಾಮಿ, ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಮಲ್ಲಿಕಾರ್ಜುನ,ಲಕ್ಷ್ಮಿಸಾಗರಚೌಡಪ್ಪ,ಅನಂತರಾಜ್, ಮಹೇಂದ್ರಕುಮಾರ್, ಸುಧಿ ಡಿ.ಎಸ್ ಹಳ್ಳಿ, ಸಮೀವುಲ್ಲ, ಎಸ್.ಕೆ.ಕುಮಾರಸ್ವಾಮಿ, ಬ್ಯಾಡರಹಳ್ಳಿ ನಿತ್ಯಶ್ರೀ, ಬೀದಿ ಬದಿ ವ್ಯಾಪಾರಿಗಳ ಸಂಘದ ಅಧ್ಯಕ್ಷ ಸಮೀವುಲ್ಲಾ ಷರೀಫ್, ಜಿ.ಆರ್ ಪಾಪಯ್ಯ, ಕೋಗುಂಡೆ ರವಿಕುಮಾರ್, ಹಂಪಯ್ಯನಮಾಳಿಗೆ ರೇವಣ್ಣ, ಕೃಷ್ಣಪ್ಪ, ಜಿಲ್ಲಾ ಕಾರ್ಯನಿರತ ಪತ್ರಿಕೆ ಹಂಚಿಕೆದಾರರ ಮತ್ತು ವಿತರಕರ ಸಂಘದ ಅಧ್ಯಕ್ಷ ತಿಪ್ಪೇಸ್ವಾಮಿ, ಕುಬೇಂದ್ರಪ್ಪ, ನಾಗರಾಜ್ ಶೆಟ್ರು, ಪ್ರಶಾಂತ್ ಇತರರಿದ್ದರು.

### ಅನಾರೋಗ್ಯ ಹಿನ್ನೆಲೆ: ಲಾರಿ ಮಾಲೀಕ ಆತ್ಮಹತ್ಯೆ

» ಚಳ್ಳಕೆರೆ



ಇಲ್ಲಿನ ಮದಕರಿ ನಗರದ ನಿವಾಸಿ, ಲಾರಿ ಮಾಲೀಕ ಎಸ್.ಬಂಡಯ್ಯ(35) ಅನಾರೋಗ್ಯ ನಿಮಿತ್ತ ತಮ್ಮ ವಾಸದ ಮನೆಯ ಬಚ್ಚಲುಮನೆಯಲ್ಲೇ ಮಂಗಳವಾರ ಬೆಳಗ್ಗೆ ನೇಣುಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ.

### ಸುರಕ್ಷಾ ಪಾಲಿ ಕ್ಲಿನಿಕ್ ಮಾಲೀಕ ಬಿ.ಫರೀದ್‌ಖಾನ್‌ಗೆ ಮಾತೃವಿಯೋಗ

» ಚಳ್ಳಕೆರೆ



ನಗರದ ಗಾಂಧಿನಗರದ ನಿವಾಸಿ ಸುರಕ್ಷಾ ಪಾಲಿ ಕ್ಲಿನಿಕ್ ಮಾಲೀಕ ಬಿ.ಫರೀದ್ ಖಾನ್‌ರವರ ತಾಯಿ ಫಾಮಿದಾಬೀ(66) ತಮ್ಮ ನಿವಾಸಲ್ಲಿ ಬೆಳಗ್ಗೆ 6.30ಕ್ಕೆ ನಿಧನರಾಗಿರುತ್ತಾರೆ. ಕಳೆದ ಕೆಲವು ತಿಂಗಳಿನಿಂದ ಅನಾರೋಗ್ಯಕ್ಕೆ ತುತ್ತಾಗಿದ್ದ ಇವರನ್ನು ಬೆಂಗಳೂರು ಸೇರಿದಂತೆ ಹಲವಾರು ನಗರಗಳ ಆಸ್ಪತ್ರೆಗೆ ದಾಖಲಿಸಿ ಸೂಕ್ತ ಚಿಕಿತ್ಸೆ ನೀಡಲಾಗಿತ್ತು. ಚೇತರಿಸಿಕೊಂಡಿದ್ದ ಫಾಮಿದಾಬೀ ಮಂಗಳವಾರ ಬೆಳಗ್ಗೆ ಆರೋಗ್ಯದಲ್ಲಿ ಏರುಪೇರು ಉಂಟಾಗಿ ಮೃತಪಟ್ಟಿರುತ್ತಾರೆ. ಇವರ ಅಂತ್ಯಕ್ರಿಯೆ ಬೆಂಗಳೂರು ರಸ್ತೆಯ ಕಬರ್‌ಸ್ಥಾನ್‌ದಲ್ಲಿ ನಡೆಯಿತು.

### ಗಣ ರಾಜ್ಯೋತ್ಸವ ಜಾಥಾ

» ದಾವಣಗೆರೆ

ಬಾಪೂಜಿ ವಿದ್ಯಾಸಂಸ್ಥೆಯ ಆರ್.ಎಲ್. ಕಾನೂನು ಕಾಲೇಜು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ದಾವಣಗೆರೆ ಮತ್ತು ಜಿಲ್ಲಾ ವಕೀಲರ ಸಂಘ, ದಾವಣಗೆರೆ ಇವರ ಸಹಯೋಗದೊಂದಿಗೆ 75ನೇ ಗಣರಾಜ್ಯೋತ್ಸವ ಅಂಗವಾಗಿ ಜಾಥಾವನ್ನು 24ರ ಬೆಳಿಗ್ಗೆ10ಕ್ಕೆನಗರದಆರ್.ಎಲ್.ಕಾನೂನುಕಾಲೇಜಿನ ಆವರಣದಲ್ಲಿ ಆಯೋಜಿಸಲಾಗಿದೆ. ಜಾಥಾಕ್ಕೆ ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ಉದ್ಘಾಟಿಸುವರು. ಹಿರಿಯ ಸಿವಿಲ್ ನ್ಯಾಯಾಧೀಶರೂ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಎಂ.ಕರಣ್ಣವರ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್.ಅರುಣ್‌ಕುಮಾರ್ ಮುಖ್ಯಅತಿಥಿಗಳಾಗಿ ಆಗಮಿಸಲಿದ್ದು, ಕಾನೂನು ಕಾಲೇಜಿನ ಪ್ರಾಚಾರ್ಯ ಡಾ.ಜಿ.ಎಸ್.ಯತೀಶ್ ಅಧ್ಯಕ್ಷತೆ ವಹಿಸಲಿದ್ದಾರೆ. ಈ ವೇಳೆ ಬಸವನಗೌಡ, ಟಿ.ವಿದ್ಯಾಧರ ವೇದವರ್ಮ, ಟಿ.ಸಿ.ಪಂಕಜಾ, ಎಚ್.ಆರ್.ಪವನ್ ಉಪಸ್ಥಿತರಿರಲಿದ್ದಾರೆ.

### ಪ್ರಗತಿ ಪರಿಶೀಲನಾ ಸಭೆಯಲ್ಲಿ ಶಿಕ್ಷಣ ಸಚಿವ ಎಸ್.ಮಧು ಬಂಗಾರಪ್ಪ ಸೂಚನೆ

# ಜಿಲ್ಲೆಯಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮುಖ್ಯವಾಹಿನಿಗೆ ಕರೆ ತನ್ನಿ

» ಚಿತ್ರದುರ್ಗ



ಜಿಲ್ಲೆಯಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಕಡ್ಡಾಯವಾಗಿ ಮುಖ್ಯವಾಹಿನಿಗೆ ತರಬೇಕು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರಾದ ಎಸ್. ಮಧು ಬಂಗಾರಪ್ಪ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶಾಲೆಯಿಂದ ಹೊರಗುಳಿದ ಮಕ್ಕಳನ್ನು ವಾಪಸ್ ಶಾಲೆಗೆ ಕರೆತರುವುದು ಬಹಳ ಮುಖ್ಯ ಆದ್ಯತೆಯಾಗಿದೆ. ಪ್ರತಿಯೊಂದು ಮಗುವಿನ ಸಂಪೂರ್ಣ ವಿವರ ತಯಾರಿಸಬೇಕು. ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲೆಗೆ ಕರೆ ತಂದು ಅವರನ್ನು ಬುದ್ಧಿವಂತರನ್ನಾಗಿ ಮಾಡಬೇಕು. ಈ ಕುರಿತು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು ಹೆಚ್ಚಿನ ಜವಾಬ್ದಾರಿ ವಹಿಸಬೇಕು. ಇದರ ಜೊತೆಗೆ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬಿಆರ್‌ಸಿ, ಸಿಆರ್‌ಪಿ ಹಾಗೂ ಮುಖ್ಯ ಶಿಕ್ಷಕರು, ಸಹ ಶಿಕ್ಷಕರ ಸಹಕಾರ ಪಡೆದು ಶಾಲೆಯಿಂದ ಹೊರಗುಳಿದ ಮಕ್ಕಳನ್ನು, ಪೋಷಕರನ್ನು ಮನವೊಲಿಸಿ, ಶಾಲೆಗೆ ಕರೆತರಬೇಕು. ಸರ್ಕಾರಿ ಶಾಲೆಯ ಮಕ್ಕಳಿಗೆ ಸರ್ಕಾರವು ಸಮವಸ್ತ್ರ, ಶೂ, ಬಿಸಿಯೂಟ, ಹಾಲು, ಮೊಟ್ಟೆ, ಬಾಳೆಹಣ್ಣು, ಉಚಿತ ವಿದ್ಯುತ್ ಸೇರಿದಂತೆ ಹಲವು ಸೌಲಭ್ಯಗಳನ್ನು ಒದಗಿಸಿದೆ. ಹಾಗಾಗಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲೆಗೆ ಕರೆತಂದು ಶಿಕ್ಷಣ ನೀಡಬೇಕು ಎಂದು ಹೇಳಿದರು.

ಚಿತ್ರದುರ್ಗದ ಯಶಸ್ವಿ ಕಾರ್ಯಕ್ರಮ ಇತರೆ ಜಿಲ್ಲೆಗಳು ಅನುಸರಿಸಲಿ : ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯ ಫಲಿತಾಂಶದಲ್ಲಿ ಕಳೆದ ವರ್ಷ ಚಿತ್ರದುರ್ಗ ಜಿಲ್ಲೆ ರಾಜ್ಯದಲ್ಲಿಯೇ ಮೊದಲ ಸ್ಥಾನ ಗಳಿಸಿತ್ತು. ಈ ರೀತಿಯ ಯಶಸ್ವಿಗೆ ಜಿಲ್ಲೆಯಲ್ಲಿಅನುಸರಿಸಿದಕಾರ್ಯಕ್ರಮಗಳು, ವಿಷಯವಾರು ಕಾರ್ಯಗಾರಗಳು, ಯೋಜನಾಬದ್ಧ ವ್ಯವಸ್ಥೆಯನ್ನು ಇತರೆ ಜಿಲ್ಲೆಗಳೂ ಕೂಡ ಅನುಸರಿಸಬೇಕು. ಇಡೀ ರಾಜ್ಯಕ್ಕೂ ಕೂಡ ಅಳವಡಿಸಬಹುದಾಗಿದೆ ಎಂದು ಸಚಿವರು ಸಲಹೆ ನೀಡಿದರು.

"ನನ್ನ ಶಾಲೆ ನನ್ನ-ಜವಾಬ್ದಾರಿ" ಕಾರ್ಯಕ್ರಮ: ಶಾಲೆಗಳ ಸರ್ವತೋಮುಖ ಅಭಿವೃದ್ಧಿಗೆ "ನನ್ನ ಶಾಲೆ-ನನ್ನ ಜವಾಬ್ದಾರಿ" ಎಂಬ ಕಾರ್ಯಕ್ರಮ ರೂಪಿಸಿ, ಶಾಲೆಯ ಹಳೆಯ ವಿದ್ಯಾರ್ಥಿಗಳು, ಶಿಕ್ಷಕರು, ದಾನಿಗಳು, ಪೋಷಕರ ನೆರವು ಪಡೆದು, ಶಾಲೆಗಳ ಅಭಿವೃದ್ಧಿಗೆ ಒತ್ತು ನೀಡಲಾಗುವುದು. ಶೀಘ್ರದಲ್ಲಿಯೇ ಮುಖ್ಯಮಂತ್ರಿಗಳು ಈ ಕಾರ್ಯಕ್ರಮಕ್ಕೆ ಚಾಲನೆ ನೀಡುವರು ಎಂದು ಸಚಿವ ಮಧು ಎಸ್.ಬಂಗಾರಪ್ಪ ತಿಳಿಸಿದರು.

ಬಹಳಷ್ಟು ಸರ್ಕಾರಿ ಶಾಲೆಗಳು ದಾನಿಗಳ ಕೊಡುಗೆಯಾಗಿವೆ. ಸರ್ಕಾರಿ ಶಾಲೆಯಲ್ಲಿ ವ್ಯಾಸಂಗ ಮಾಡಿದವರು ಬಹಳಷ್ಟು ಜನರು ಉನ್ನತ ಸ್ಥಾನ ಅಲಂಕರಿಸಿದ್ದಾರೆ. ರಾಜ್ಯದ ಹಲವು ಕಡೆಗಳಲ್ಲಿ ಹಳೆಯ ವಿದ್ಯಾರ್ಥಿಗಳ ಸಂಘದವರು ಸರ್ಕಾರದ ಯಾವುದೇ ಅನುದಾನ ಬಳಸದೇ ಉತ್ತಮ ಗುಣಮಟ್ಟದ ಶಾಲೆಗಳನ್ನು ನಿರ್ಮಿಸಿದ್ದಾರೆ. ಹಾಗಾಗಿ ಹಳೆಯ ವಿದ್ಯಾರ್ಥಿಗಳ ಸಂಘ ಹಾಗೂ ಶಿಕ್ಷಕರು ನನ್ನ ಶಾಲೆ ನನ್ನ ಜವಾಬ್ದಾರಿ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಿ ಶಾಲೆಗಳ ಅಭಿವೃದ್ಧಿಗೆ ಒತ್ತು ನೀಡಬೇಕು ಎಂದು ಸಚಿವರು ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ. ರವಿಶಂಕರ್ ರೆಡ್ಡಿ ಮಾತನಾಡಿ, 2023-24ನೇಸಾಲಿನಲ್ಲಿಶಾಲೆಯಿಂದಹೊರಗುಳಿದ 429 ಮಕ್ಕಳಲ್ಲಿ ಈಗಾಗಲೇ 381 ಮಕ್ಕಳನ್ನು ಮುಖ್ಯವಾಹಿನಿಗೆ ತರಲಾಗಿದೆ. 48 ಮಕ್ಕಳು ಶಾಲೆಯಿಂದ ಹೊರಗುಳಿದ್ದು, ಈ ಮಕ್ಕಳನ್ನು ಮುಖ್ಯವಾಹಿನಿಗೆ ತರಲು ಕ್ರಮವಹಿಸಲಾಗುತ್ತಿದೆ ಎಂದರು.

ಜಿಲ್ಲೆಯಲ್ಲಿ ಪ್ರಾಥಮಿಕ 6,275 ಹಾಗೂ ಪ್ರೌಢಶಾಲಾ 1,215 ಸರ್ಕಾರಿ ಶಿಕ್ಷಕರ ಹುದ್ದೆ ಮಂಜೂರಾಗಿದ್ದು, 5,258 ಪ್ರಾಥಮಿಕ ಹಾಗೂ 1,029 ಪ್ರೌಢಶಾಲಾ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ. 1,017 ಪ್ರಾಥಮಿಕ ಹಾಗೂ 186 ಪ್ರೌಢ ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಖಾಲಿ ಹುದ್ದೆಗಳಿಗೆ ಅನುಗುಣವಾಗಿ ಅತಿಥಿ ಶಿಕ್ಷಕರನ್ನು ನಿಯೋಜನೆ ಮಾಡಿ, ಪಾಠ ಪ್ರವಚನಗಳನ್ನು ನಡೆಸಲಾಗುತ್ತಿದೆ. 263 ಹೊಸ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಯಾಗಿದ್ದು, ಈಗಾಗಲೇ ನೇಮಕಾತಿ ಆದೇಶ ನೀಡಲಾಗಿದೆ. 11 ಶಿಕ್ಷಕರಿಗೆ ಮಾತ್ರ ನೇಮಕಾತಿ ಆದೇಶ ಬಾಕಿ ಇದೆ. ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಯಾವುದೇ ಶಿಕ್ಷಕರ ಕೊರತೆ ಇಲ್ಲ ಎಂದರು.ಚಳ್ಳಕೆರೆ ತಾಲ್ಲೂಕು ಅಭಿಷೇಕ್ ನಗರ ಹಾಗೂ ಹಿರಿಯೂರು ತಾಲ್ಲೂಕು ಕೆರೆಮುಂದಲಹಟ್ಟಿಯಲ್ಲಿ ಕಿರಿಯ ಪ್ರಾಥಮಿಕ ಶಾಲೆಗಳ ಬೇಡಿಕೆ ಇದೆ. ಮೊಳಕಾಲ್ಮುರು ತಾಲ್ಲೂಕಿನಲ್ಲಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಹೆಚ್ಚಾಗಿದ್ದು, ಈ ಶಾಲೆಗಳನ್ನು ಪ್ರೌಢಶಾಲೆಗಳಾಗಿ ಉನ್ನತೀಕರಿಸಲು ಪ್ರಸ್ತಾವನೆ ಸಲ್ಲಿಸಲಾಗಿದೆ. 2024-25ನೇ ಸಾಲಿಗೆ ಜಿಲ್ಲೆಯಲ್ಲಿ ಹೊಸದಾಗಿ 23 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲು ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದರು.


2022-23 ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ 21,995 ವಿದ್ಯಾರ್ಥಿಗಳು ಹಾಜರಾಗಿದ್ದು, ಇದರಲ್ಲಿ 21,300 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಶೇ. 96.8 ರಷ್ಟು ಫಲಿತಾಂಶ ಲಭಿಸಿದೆ. 2021-22 ನೇ ಸಾಲಿನಲ್ಲಿ ಶೇ. 94.3 ಫಲಿತಾಂಶ ಲಭಿಸಿತ್ತು. ಪ್ರಸ್ತುತ ವರ್ಷದ ಫಲಿತಾಂಶವು ಕಳೆದ ವರ್ಷಕ್ಕಿಂತ ಶೇ. 2.49ರಷ್ಟು ಹೆಚ್ಚಳವಾಗಿದೆ. ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಜಿಲ್ಲೆಯ ಇಡೀ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿದೆ. ಈ ಬಾರಿಯು ಸಹ ಮೊದಲ ಸ್ಥಾನ ಪಡೆಯಲು ಕ್ರಮ ವಹಿಸಲಾಗುತ್ತಿದೆ ಎಂದರು. ಇದೇ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶ ಉತ್ತಮಪಡಿಸುವ ಸಂಬಂಧ ಜಿಲ್ಲಾ ಹಂತದಲ್ಲಿ ವಿಷಯವಾರು ಕಾರ್ಯಾಗಾರಗಳನ್ನು ನಡೆಸಿ, ವಿಷಯವಾರು ಪರೀಕ್ಷಾ ಪೂರಕ ಸಾಹಿತ್ಯಗಳನ್ನು ಶಿಕ್ಷಣ ಸಚಿವ ಮಧು ಎಸ್ ಬಂಗಾರಪ್ಪ ಬಿಡುಗಡೆ ಮಾಡಿದರು.

ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್,ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್, ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಪುಟ್ಟಸ್ವಾಮಿ, ಡಯಟ್ ಪ್ರಾಂಶುಪಾಲ ನಾಸಿರುದ್ದೀನ್ ಸೇರಿದಂತೆ ಶಿಕ್ಷಣ ಇಲಾಖೆ ಅಧಿಕಾರಿಗಳು ಇದ್ದರು.

### ಬಾಕಿ ಅರ್ಜಿಗಳ ಶೀಘ್ರ ವಿಲೇವಾರಿಗೆ ಜಿಲ್ಲಾಧಿಕಾರಿ ಸೂಚನೆ

# ಜನತಾ ದರ್ಶನ: 2631 ಅರ್ಜಿಗಳ ಸ್ವೀಕಾರ, 2134 ಅರ್ಜಿಗಳ ವಿಲೇವಾರಿ

» ಚಿತ್ರದುರ್ಗ



ಜಿಲ್ಲೆಯ 9 ಕಡೆಗಳಲ್ಲಿ ಇದುವರೆಗೂ ಜನತಾ ದರ್ಶನ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಒಟ್ಟು 2631 ಅರ್ಜಿ ಸ್ವೀಕಾರವಾಗಿವೆ. 2134 ಅರ್ಜಿಗಳನ್ನು ವಿಲೇ ಮಾಡಲಾಗಿದೆ. ಕಂದಾಯ ಇಲಾಖೆ 277 ಹಾಗೂ ಇತರೆ ಇಲಾಖೆಗಳ 220 ಅರ್ಜಿಗಳು ಬಾಕಿ ಉಳಿದಿದ್ದು, ಅಧಿಕಾರಿಗಳು ಈ ಕುರಿತು ಕ್ರಮಕೈಗೊಂಡು ಅರ್ಜಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡುವಂತೆ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸೋಮವಾರ ಈ ಕುರಿತು ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಸಭೆಯಲ್ಲಿ ಅವರು ಮಾತನಾಡಿದರು.

ಜನತಾ ದರ್ಶನದಲ್ಲಿ ಸ್ವೀಕರಿಸಿದ ಅರ್ಜಿಗಳ ವಿಲೇವಾರಿ ಒಂದು ತಿಂಗಳು ಮಾತ್ರ ಕಾಲಾವಕಾಶವಿದೆ. ಈ ಕಾಲಮಿತಿಯಲ್ಲಿಯೇ ಅರ್ಜಿಗಳ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಕ್ರಮಕೈಗೊಳ್ಳಬೇಕು. ಸ್ವೀಕರಿಸಿದ ಅರ್ಜಿಗಳು ಐ.ಪಿ.ಜಿ.ಆರ್.ಎಸ್ ತಂತ್ರಾಂಶದಲ್ಲಿ ಗಣಕೀಕೃತಗೊಂಡಿವೆ. ಜನರ ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಪರಿಹಾರ ದೊರಕಬೇಕು. ಇದರ ಹೊರತಾಗಿ ಜನರು ಸಮಸ್ಯೆಗಳ ಪರಿಹಾರಕ್ಕೆ ಮುಖ್ಯಮಂತ್ರಿಗಳ ಜನತಾ ದರ್ಶನಕ್ಕೆ ಹೋಗಿ ಮತ್ತೊಮ್ಮೆ ಅರ್ಜಿ ಸಲ್ಲಿಸುವಂತಾಗಬಾರದು. ಈ ರೀತಿಯಾಗಿ ಸ್ಥಳೀಯವಾಗಿ ಪರಿಹರಿಸಬಹುದಾದ ಸಮಸ್ಯೆಗಳನ್ನು ಹೊತ್ತು, ಜನರು ನನ್ನ ಬಳಿ ಬಂದರೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಮುಖ್ಯಮಂತ್ರಿಗಳು ನವೆಂಬರ್ 27 ರಂದು ಜರುಗಿದ ಬೃಹತ್ ಜನತಾ ದರ್ಶನದಲ್ಲಿ ಎಚ್ಚರಿಕೆ ನೀಡಿದ್ದಾರೆ. ಫೆ.8 ರಂದು ಮುಖ್ಯಮಂತ್ರಿಗಳ ಬೃಹತ್ ಜನತಾ ದರ್ಶನ ನಡೆಯುವ ಸಾಧ್ಯತೆ ಇದೆ.

ಈ ಸಂದರ್ಭದಲ್ಲಿ ಇದುವರೆಗೂ ಜಿಲ್ಲೆಯಲ್ಲಿ ಜರುಗಿದ ಜನತಾ ದರ್ಶನ ಅರ್ಜಿಗಳ ವಿಲೇವಾರಿ ಕುರಿತು ಮುಖ್ಯಮಂತ್ರಿಗಳು ಮಾಹಿತಿ ಪಡೆಯಲಿದ್ದಾರೆ. ಅಧಿಕಾರಿಗಳು ನಿರ್ಲಕ್ಷ್ವವಹಿಸದೇ ತ್ವರಿತವಾಗಿ ಅರ್ಜಿಗಳನ್ನು ವಿಲೇ ಮಾಡಬೇಕು ಎಂದರು.

ಜನತಾ ದರ್ಶನದ ಹೊರತಾಗಿ ಮುಖ್ಯಮಂತ್ರಿಗಳ ಕಚೇರಿ ಸಾರ್ವಜನಿಕರು ಸಲ್ಲಿಸುವ ಕುಂದುಕೊರತೆ, ಅಹವಾಲು, ಸಾರ್ವಜನಿಕರದೂರುಗಳನ್ನುಸಹಐ.ಪಿ.ಜಿ.ಆರ್.ಎಸ್ ತಂತ್ರಾಂಶ ಮೂಲಕ ಸಂಬಂಧಪಟ್ಟ ಜಿಲ್ಲೆಗಳಿಗೆ ಕಳುಹಿಸಕೊಡಲಾಗುತ್ತಿದೆ. ಈ ರೀತಿಯಾಗಿ ಜಿಲ್ಲೆಗೆ ಸಂಬಂಧಿಸಿದ 38 ಕುಂದುಕೊರತೆ ಹಾಗೂ ಅವಹಾಲುಗಳು, 72 ಸಾರ್ವಜನಿಕರ ಮನವಿಗಳ ವಿಲೇವಾರಿಯನ್ನು ಸಹ ತುರ್ತಾಗಿ ಮಾಡಬೇಕು. ಜಿಲ್ಲೆಯ ಹಲವು ಅಧಿಕಾರಿಗಳು ಐ.ಪಿ.ಜಿ.ಆರ್.ಎಸ್ ತಂತ್ರಾಂಶಕ್ಕೆ ಲಾಗಿನ್ ಕೂಡ ಆಗಿಲ್ಲ. ಇದನ್ನು ಗಂಭೀರವಾಗಿ ಪರಿಗಣಿಸಲಾಗುವುದು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಎಚ್ಚರಿಸಿದರು. ಇದೇ ಸಂದರ್ಭದಲ್ಲಿ ಸಂಬಂಧಪಟ್ಟ ಶಾಸಕರುಗಳ ನೇತೃತ್ವದಲ್ಲಿ ಬಗರ್‌ಹುಕುಂ ಸಮಿತಿ ಸಭೆ ನಡೆಸಿ, ಅರ್ಜಿಗಳನ್ನು ಪರಿಹರಿಸುವಂತೆ ಸೂಚಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಪ್ರಭಾರೆ ಉಪವಿಭಾಗಾಧಿಕಾರಿ ವಿವೇಕ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ.ಬಣಕಾರ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಧಿಕಾರಿ ಓ.ಪರಮೇಶ್ವರಪ್ಪ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಧಿಕಾರಿ ಡಾ.ರೇಣುಪ್ರಸಾದ್ ಸೇರಿದಂತೆ ಎಲ್ಲಾ ತಾಲ್ಲೂಕುಗಳ ತಹಶೀಲ್ದಾರ್, ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

### ನಿರಾಶ್ರಿತರ ಕೇಂದ್ರಕ್ಕೆ ಹಿರಿಯ ಸಿವಿಲ್ ನ್ಯಾ.ವಿಜಯ್ ಭೇಟಿ



**ಚಿತ್ರದುರ್ಗ:** ತಾಲ್ಲೂಕಿನ ಗೋನೂರು ಸಮೀಪದ ಹೋ.ಚಿ.ಬೋರಯ್ಯ ಬಡಾವಣೆಯ ನಿರಾಶ್ರಿತರ ಪರಿಹಾರ ಕೇಂದ್ರಕ್ಕೆ ಮಂಗಳವಾರ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಅವರು ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆ ನಡೆಸಿದರು.ನಿರಾಶ್ರಿತರ ಪರಿಹಾರ ಕೇಂದ್ರದ ಡಾರ್ಮೆಂಟರಿ, ಅಡುಗೆ ಮನೆ ಸ್ವಚ್ಛತೆಯನ್ನು ನೋಡಿ ಪ್ರಶಂಸೆ ವ್ಯಕ್ತಪಡಿಸಿದ್ದು, ಕೇಂದ್ರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧೀಕ್ಷಕರು ಹಾಗೂ ಸಿಬ್ಬಂದಿಗಳ ಕೆಲಸಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ನಿರಾಶ್ರಿತರ ಪರಿಹಾರ ಕೇಂದ್ರದಲ್ಲಿ 332 ಪುರುಷರು, 71 ಮಹಿಳೆಯರು ಸೇರಿದಂತೆ ಒಟ್ಟು 403 ಜನ ನಿರಾಶ್ರಿತರು ಇದ್ದು, ನಿರಾಶ್ರಿತರ ಕುಂದು ಕೊರತೆ ವಿಚಾರಣೆ ಮಾಡಿದ ಅವರು, ನಿರಾಶ್ರಿತರ ವಿಳಾಸವನ್ನು ಪತ್ತೆ ಮಾಡಿ, ಆದಷ್ಟು ಬೇಗ ಇವರನ್ನು ಮರಳಿ ಮನೆಗೆ ಕಳುಹಿಸುವ ಪ್ರಯತ್ನ ಮಾಡಬೇಕು ಎಂದು ತಿಳಿಸಿದರು.ಈ ಸಂದರ್ಭದಲ್ಲಿ ನಿರಾಶ್ರಿತರ ಪರಿಹಾರ ಕೇಂದ್ರದ ಅಧೀಕ್ಷಕ ಮಹಾದೇವಯ್ಯ ಸೇರಿದಂತೆ ನಿರಾಶ್ರಿತ ಪರಿಹಾರ ಕೇಂದ್ರದ ಸಿಬ್ಬಂದಿ ಇದ್ದರು.

## ಪ್ರಮುಖ ಸುದ್ದಿ

# ಅಂದತ್ವ ಮುಕ್ತ ಸಮಾಜ ನಿರ್ಮಾಣಕ್ಕಾಗಿ "ಆಶಾಕಿರಣ"

» ಚಿತ್ರದುರ್ಗ



ಅಂದತ್ವ ಮುಕ್ತ ಸಮಾಜ ನಿರ್ಮಾಣಕ್ಕಾಗಿ "ಆಶಾಕಿರಣ" ವಿನೂತನ ಕಾರ್ಯಕ್ರಮವಾಗಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ರೇಣುಪ್ರಸಾದ್ ಹೇಳಿದರು.

ಇಲ್ಲಿನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಸಭಾಂಗಣದಲ್ಲಿ ಈಚೆಗೆ ಆಶಾ ಕಾರ್ಯಕರ್ತೆಯರಿಗೆ, ಸಮುದಾಯ ಆರೋಗ್ಯ ಅಧಿಕಾರಿಗಳಿಗೆ, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳಿಗೆ ಮತ್ತು ಆರೋಗ್ಯ ನಿರೀಕ್ಷಣಾಧಿಕಾರಿಗಳಿಗೆ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳಿಗೆ ರಾಷ್ಟ್ರೀಯ ಅಂದತ್ವ ನಿವಾರಣ ಕಾರ್ಯಕ್ರಮದಅಡಿಯಲ್ಲಿವಿನೂತನವಾಗಿ ಪ್ರಾರಂಭಿಸಲಾಗುವ ಆಶಾಕಿರಣ ಕಾರ್ಯಕ್ರಮದ ಬಗ್ಗೆ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಗಾರದಲ್ಲಿ ಅವರು ಮಾತನಾಡಿದರು.

ಜಿಲ್ಲೆಯ ಎಲ್ಲಾ ಮನೆಮನೆಗಳ ಭೇಟಿ ಸಮೀಕ್ಷೆ, ಅಂದತ್ವ ತಪಾಸಣೆ ನಡೆಸುವುದು, ಸಮೀಕ್ಷೆ ನಡೆಸಿದ ಮನೆಗಳಿಗೆ ಹಸಿರು ಹಳದಿ ಕೆಂಪು ಬಣ್ಣದ ಸ್ಟಿಕರ್‌ಗಳನ್ನು ಹಚ್ಚುವುದು ಸಮೀಕ್ಷೆ ನಡೆಸಿದ ಎಲ್ಲಾ ಮನೆಗಳಿಗ ಕುಟುಂಬದ ಸದಸ್ಯರ ಅಂಧತ್ವದ ಬಗ್ಗೆ ತಪಾಸಣೆ ನಡೆಸುವುದು ಮಾಹಿತಿ ಸಂಗ್ರಹಿಸುವುದು, ಸಮೀಕ್ಷೆಯ ಸಂದರ್ಭದಲ್ಲಿ ಕುಟುಂಬದ ಸದಸ್ಯರು ಇಲ್ಲದಿರುವ ಮನೆಗಳಿಗೆ ಹಳದಿ ಬಣ್ಣದ ಸ್ಟಿಕರ್ ಹಚ್ಚುವುದು, ದೃಷ್ಟಿ ದೋಷ ಹೊಂದಿರುವ ಕುಟುಂಬದ ಸದಸ್ಯರ ಮನೆಗಳಿಗೆ ಕೆಂಪು ಬಣ್ಣದ ಸ್ಟಿಕರ್ ಹಚ್ಚುವುದು ಆಶಾಕಿರಣ ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ ಎಂದರು.

ರಾಷ್ಟ್ರೀಯ ಅಂದತ್ವ ನಿವಾರಣಾ ಕಾರ್ಯಕ್ರಮದ ಜಿಲ್ಲಾ ಅನುಷ್ಠಾನಾಧಿಕಾರಿ ಡಾ. ನಾಗರಾಜ್ ಮಾತನಾಡಿ, ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು ಈ ಸಮೀಕ್ಷೆಯ ಮೇಲುಸ್ತುವಾರಿ ಜವಾಬ್ದಾರಿ ಪಡೆಯಬೇಕು.

ಅಂದತ್ವದ ಸಮೀಕ್ಷೆ ನಡೆಸಿ ವರದಿಗಳನ್ನು ಜಿಲ್ಲಾಮಟ್ಟಕ್ಕೆ ರವಾನಿಸಬೇಕು. ಪ್ರತಿ ಸದಸ್ಯರ ತಪಾಸಣೆ ನಡೆಸಿದಾಗ ಕಂಡುಬಂದಂತಹ ಮಾನದಂಡಗಳನ್ನ ದಾಖಲಿಸಲು ದಾಖಲಾತಿ ಪುಸ್ತಕಗಳನ್ನು ವಿತರಿಸಲಾಗಿದೆ, ಸಮೀಪ ದೃಷ್ಟಿ, ದೂರ ದೃಷ್ಟಿ ಕಂಡುಹಿಡಿಯಲು ಅಗತ್ಯ ಪರಿಕರಗಳನ್ನು ನೀಡಲಾಗಿದೆ ಎಂದರು.

ಗ್ರಾಮಮಟ್ಟದಲ್ಲಿ ಕಂಡುಬಂದಂತಹ ದೃಷ್ಟಿ ದೋಷದ ಕುಟುಂಬ ಸದಸ್ಯರನ್ನು ಹತ್ತಿರದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಕರೆತಂದು ಈಗಾಗಲೇ ಗುರುತಿಸಲಾದ ನೇತ್ರಾಧಿಕಾರಿಗಳನ್ನು ಕರೆಸಿ ಕಣ್ಣಿನ ದೃಷ್ಟಿ ದೋಷಗಳನ್ನು ತಪಾಸಣೆ ನಡೆಸಿ ಅಗತ್ಯವಿದ್ದವರಿಗೆ ಕನ್ನಡಕಗಳನ್ನು ಪೂರೆ ಬಂದವರಿಗೆ ಶಸ್ತ್ರಚಿಕಿತ್ಸಾ ಸೇವೆ ಒದಗಿಸುವುದು ಎಂದರು.

ಜಿಲ್ಲಾಸ್ಪತ್ರೆ ಕಣ್ಣಿನ ತಜ್ಞರು ಡಾ.ಬಿ.ಜಿ.ಪ್ರದೀಪ್ ತರಬೇತಿ ಕಾರ್ಯಾಗಾರದಲ್ಲಿ ಮಾತನಾಡಿ, ಕಣ್ಣುಗಳನ್ನು ಪರೀಕ್ಷಿಸುವ ವಿಧಾನವನ್ನು ಸಂಗ್ರಹಿಸಬೇಕಾದ ದತ್ತಾಂಶಗಳ ವಿವರಗಳನ್ನು ತುಂಬಬೇಕಾದ ಅಗತ್ಯ ಮಾಹಿತಿಗಳನ್ನು ಹೇಗೆ ಸಂಗ್ರಹಿಸಬೇಕು ಎಂಬುದನ್ನು ತಿಳಿಸಿಕೊಟ್ಟರು.

ಇದೇ ಸಂದರ್ಭದಲ್ಲಿ ಕ್ಷೇತ್ರ ಮಟ್ಟದ ಸಿಬ್ಬಂದಿಗಳಿಗೆ ಆಶಾ ಕಿರಣ ಯೋಜನೆ ಅಡಿ ಕಿಟ್‌ಗಳನ್ನ ಡಿಹೆಚ್‌ಒ ಡಾ.ರೇಣುಪ್ರಸಾದ್ ವಿತರಿಸಿದರು. ಕಾರ್ಯಕ್ರಮದಲ್ಲಿ ನೇತ್ರಾಧಿಕಾರಿಗಳಾದ ಕೆ.ಸಿ ರಾಮು, ರಜಿನಿ, ಬರ್ಕತ್ ಅಲಿ ಇದ್ದರು.

## ಫಾಸ್ಟ್ ನ್ಯೂಸ್

### ಜ.24ರಂದು ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಂಯುಕ್ತಾಶ್ರಯದಲ್ಲಿ ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯಡಿ "ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ" ಸುಕನ್ಯಾ ಸಮೃದ್ಧಿ ಯೋಜನೆಯ ಪಾಸ್‌ಬುಕ್ ವಿತರಣಾ ಕಾರ್ಯಕ್ರಮವನ್ನು ಇದೇ ಜನವರಿ 24ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ನಗರದ ಕಬೀರಾನಂದಾಶ್ರಯದಲ್ಲಿ ಆಯೋಜಿಸಲಾಗಿದೆ. ಕಬೀರಾನಂದಾಶ್ರಮದಪೀಠಾಧ್ಯಕ್ಷಶಿವಲಿಂಗಾನಂದ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸುವರು. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವ ಎ. ನಾರಾಯಣಸ್ವಾಮಿ ಘನ ಉಪಸ್ಥಿತಿ ವಹಿಸುವರು. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಆಹ್ವಾನಿತರಾಗಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ್ ಭಾಷಾ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಜಿ. ಗೋವಿಂದಪ್ಪ, ಟಿ.ರಘುಮೂರ್ತಿ, ಡಾ.ಎಂ.ಚಂದ್ರಪ್ಪ, ಎನ್.ವೈ. ಗೋಪಾಲಕೃಷ್ಣ, ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ಎ.ನಾರಾಯಣಸ್ವಾಮಿ, ಚಿದಾನಂದ ಎಂ. ಗೌಡ, ಕೆ.ಎಸ್.ನವೀನ್, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಧರ್ಮೇಂದರ್ ಕುಮಾರ್ ಮೀನಾ, ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿ ಡಾ.ರೇಣು ಪ್ರಸಾದ್, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್ ರೆಡ್ಡಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಭಾಗವಹಿಸುವರು. ಚಿತ್ರದುರ್ಗ ಬಾಲನ್ಯಾಯ ಮಂಡಳಿ ಸದಸ್ಯೆ ಸುಮನ ಎಸ್ ಅಂಗಡಿ ವಿಶೇಷ ಉಪನ್ಯಾಸ ನೀಡುವರು ಎಂದು ಪ್ರಕಟಣೆ ತಿಳಿಸಿದೆ.

### ಹೊನ್ನೂರು ಆಂಜನೇಯಸ್ವಾಮಿ ಸನ್ನಿಧಿಯಲ್ಲಿ ಬಾಲರಾಮ ಪ್ರತಿಷ್ಠಾಪನೆ, ಪೂಜೆ



» ಚಳ್ಳಕೆರೆ

ತಾಲ್ಲೂಕಿನ ತಳಕು ಹೋಬಳಿಯ ಹೊನ್ನೂರು ಗ್ರಾಮದ ಶ್ರೀಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಅಯೋಧ್ಯನಾಥ ಶ್ರೀರಾಮಚಂದ್ರನ ಪ್ರತಿಷ್ಠಾಪನೆ ಹಿನ್ನೆಲೆಯಲ್ಲಿ ವಿಶೇಷ ಪೂಜೆಯನ್ನು ಗ್ರಾಮದ ರಾಮಭಕ್ತರುಹಮ್ಮಿಕೊಂಡಿದ್ದರು.ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಗ್ರಾಮ ಪಂಚಾಯಿತಿ ಸದಸ್ಯ ನಾರಾಯಣರೆಡ್ಡಿ, ಪ್ರಭುಶ್ರೀರಾಮಚಂದ್ರನ ಆದರ್ಶಗಳು ನಮಗೆಲ್ಲಾ ದಾರಿದೀಪವಾಗಿವೆ, ರಾಮನ ಜನ್ಮಸ್ಥಾನದಲ್ಲಿಯೇ ಶ್ರೀಬಾಲರಾಮನ ವಿಗ್ರಹ ಪ್ರತಿಷ್ಠಾಪನೆ ಮೂಲಕ ಕೋಟ್ಯಾಂತರ ರಾಮಭಕ್ತರನೂರಾರುವರ್ಷಗಳಕನಸುನನಸಾಗಿದೆ ಎಂದರು. ಕಾರ್ಯಕ್ರಮದಲ್ಲಿ ಗ್ರಾಮದ ಹಿರಿಯ ಮುಖಂಡ ಎಚ್.ವಿ.ಪ್ರಕಾಶ್‌ರೆಡ್ಡಿ,ಜಯಶೀಲರೆಡ್ಡಿ, ರಾಮರೆಡ್ಡಿ, ಕಿಶೋರ್, ಭೀಮಾರೆಡ್ಡಿ, ರುದ್ರಪ್ಪ, ಸುರೇಶ್, ರಮೇಶ್, ಅವಿನಾಶ ಮುಂತಾದವರು ಭಾಗವಹಿಸಿದ್ದರು.

### ಬಾಲರಾಮನ ಪ್ರತಿಷ್ಠಾಪನೆ: ರಾಮಭಕ್ತರಿಂದ ಉಚಿತ ಮಜ್ಜಿಗೆ ವಿತರಣೆ



» ಚಳ್ಳಕೆರೆ

ಚಳ್ಳಕೆರೆ ನಗರದ ಚಿತ್ರದುರ್ಗ ರಸ್ತೆಯಲ್ಲಿರುವ ಶ್ರೀಕೃಷ್ಣಭವನ ಹೋಟೆಲ್ ಮುಂಭಾಗದಲ್ಲಿ ಅಯೋಧ್ಯೆ ಶ್ರೀಬಾಲರಾಮನ ಪ್ರತಿಷ್ಠಾಪನೆ ಹಿನ್ನೆಲೆಯಲ್ಲಿ ಶ್ರೀರಾಮಭಕ್ತರು ಸಾರ್ವಜನಿಕರಿಗೆ ಉಚಿತ ಮಜ್ಜಿಗೆಯನ್ನು ಬೆಳಗ್ಗೆಯಿಂದ ಸಂಜೆವರೆಗೂ ವಿತರಿಸುವ ಮೂಲಕ ಶ್ರೀರಾಮಭಕ್ತ ಪ್ರದರ್ಶಿಸಿದರು. ನಿವೃತ್ತ ಆರೋಗ್ಯ ಇಲಾಖೆಯ ಹಿರಿಯ ಅಧಿಕಾರಿ ಎನ್.ಪ್ರೇಮಕುಮಾರ್ ಮಾತನಾಡಿ, ಅಯೋಧ್ಯೆಯ ಬಾಲರಾಮನ ಪ್ರತಿಷ್ಠಾಪನಾ ಕಾರ್ಯ ವಿಶ್ವಮನ್ನಣೆ ಗಳಿಸಿದೆ. ಭಾರತದ ಇತಿಹಾಸದಲ್ಲಿ ಯಾವುದೇ ದೇವಸ್ಥಾನ ನಿರ್ಮಾಣವಾದರೂ ವಿಶ್ವಕೀರ್ತಿಗಳಿಸಿರಲಿಲ್ಲ. ಆದರೆ, ಪ್ರಧಾನಮಂತ್ರಿ ನರೇಂದ್ರಮೋದಿಯವರ ನೇತೃತ್ವದಲ್ಲಿ ಈ ಪುಣ್ಯ ಕಾರ್ಯನಡೆದಿದ್ದು, ಇದು ಕೋಟಿ, ಕೋಟಿ ರಾಮಭಕ್ತರಿಗೆ ಹೆಚ್ಚು ಸಂತಸ ಉಂಟು ಮಾಡಿದೆ.

## ಶಾಲೆಗಳ ಸ್ವಚ್ಛತೆ ಅನುದಾನ ದ್ವಿಗುಣ– ಸಚಿವ ಎಸ್.ಮಧು ಬಂಗಾರಪ್ಪ

# 500 ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಮೇಲ್ದರ್ಜೆಗೆ

» ಚಿತ್ರದುರ್ಗ

ಸಾಮಾಜಿಕ ಹೊಣೆಗಾರಿಕೆ ನಿಧಿ (ಸಿ.ಎಸ್.ಆರ್) ಬಳಸಿಕೊಂಡು ಪ್ರಸಕ್ತ ವರ್ಷದಲ್ಲಿ ರಾಜ್ಯಾದ್ಯಂತ 500 ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ (ಕೆ.ಪಿ.ಎಸ್) ಮೇಲ್ದರ್ಜೆಗೆ ಏರಿಸಲಾಗುವುದು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್.ಮಧು ಬಂಗಾರಪ್ಪ ಹೇಳಿದರು.

ಮಂಗಳವಾರ ನಗರದ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸಿ ಅವರು ಮಾತನಾಡಿದರು. ರಾಜ್ಯದಲ್ಲಿ 300 ಕರ್ನಾಟಕ ಪಬ್ಲಿಕ್ ಶಾಲೆಗಳೂ ತುಂಬಾ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿವೆ. ಈ ಶಾಲೆಗಳಿಗೆ ಉತ್ತಮ ಬೇಡಿಕೆ ಇದೆ. ಇದಕ್ಕೆ ಕಾರಣ ಮಕ್ಕಳು ಕನ್ನಡ ಮತ್ತು ಇಂಗ್ಲೀಷ್ ಮಾಧ್ಯಮದಲ್ಲಿ ಶಿಕ್ಷಣ ಪಡೆಯುವುದಾಗಿದೆ ಎಂದರು.

ಈ ಶಾಲೆಗಳಲ್ಲಿ ಮಕ್ಕಳು 01 ರಿಂದ 12 ನೇ ತರಗತಿವರೆಗೆ ಸಂಪೂರ್ಣ ಉಚಿತ ಶಿಕ್ಷಣ ಪಡೆದು ಹೊರಬರುತ್ತಾರೆ. ಬರುವ ಶೈಕ್ಷಣಿಕ ವರ್ಷದಿಂದ ಕೆ.ಪಿ.ಎಸ್. ಶಾಲೆಗಳಲ್ಲಿ ಎಲ್.ಕೆ.ಜಿ ಹಾಗೂ ಯು.ಕೆ.ಜಿಯಿಂದ ಶಿಕ್ಷಣ ನೀಡಲಾಗುವುದು. ಇದರಿಂದ ಮಕ್ಕಳ ಕಲಿಕೆಯಲ್ಲಿ ಯಾವುದೇ ಅಡೆ ತಡೆಗಳು ಬರುವುದಿಲ್ಲ. ಸ್ಥಳೀಯ ಶಾಸಕರುಗಳ ಅಭಿಪ್ರಾಯ ಪಡೆದು ಮೇಲ್ದರ್ಜೆಗೇರಿಸುವ ಶಾಲೆಗಳನ್ನು ಆಯ್ಕೆ ಮಾಡಲಾಗುವುದು ಎಂದು ಸಚಿವ ಎಸ್. ಮಧು ಬಂಗಾರಪ್ಪ ತಿಳಿಸಿದರು.

ಸಿ.ಎಸ್.ಆರ್. ನಿಧಿ ಬಳಸಿ ಹೆಚ್ಚಿನ ಕೊಠಡಿಗಳೂ, ಪ್ರಯೋಗಾಲಯ, ವೃತ್ತಿ ಶಿಕ್ಷಣ, ಸುಸಜ್ಜಿತ ಶೌಚಾಲಯ ಮೂಲಭೂತ ಸೌಕರ್ಯ ಕಲ್ಪಿಸಿ, ಖಾಸಗಿ ಶಾಲೆಗಳಿಗೆ ಪೈಪೋಟಿ ನೀಡುವಂತೆ ಕೆಪಿಎಸ್ ಶಾಲೆಗಳನ್ನು ಅಭಿವೃದ್ಧಿ ಮಾಡಲಾಗುವುದು. ಎಲ್ಲಾ ವಿಷಯ ಶಿಕ್ಷಕರು, ದೈಹಿಕ, ಚಿತ್ರಕಲೆ, ಸಂಗೀತ ಶಿಕ್ಷಕರು ಕೆಪಿಎಸ್ ಶಾಲೆಗಳಲ್ಲಿ ಇರಲಿದ್ದಾರೆ. ಇದಕ್ಕೆ ತಕ್ಕಂತೆ ವಿದ್ಯಾರ್ಥಿಗಳು ಇರಬೇಕಾದ್ದು ಸಹ ಮುಖ್ಯವಾಗುತ್ತದೆ. ಈ ನಿಟ್ಟಿನಲ್ಲಿ ಹೆಚ್ಚಿನ ವಿದ್ಯಾರ್ಥಿಗಳು ಇರುವ ಶಾಲೆಗಳನ್ನೇ ಮೇಲ್ದರ್ಜೆಗೇರಿಸಿಲು ಆಯ್ಕೆ ಮಾಡಲಾಗುವುದು. ಈ ಪಟ್ಟಿಯನ್ನು ಸ್ಥಳೀಯಶಾಸಕರಮೂಲಕಅನುಮೋದನೆ ಪಡೆದುಕೊಳ್ಳಲಾಗುವುದು. ಶಾಸಕರು ಬದಲಾವಣೆ ಸೂಚಿಸಿದರೆ ಪಟ್ಟಿಯಲ್ಲಿ ಮಾರ್ಪಡು ಸಹ ಮಾಡಲಾಗುವುದು ಎಂದರು.

ಮುಂದಿನ ಐದು ವರ್ಷಗಳಲ್ಲಿ 3,000 ಸಾವಿರ ಕೆ.ಪಿ.ಎಸ್ ಶಾಲೆ ತೆರೆಯುವ ಗುರಿಯನ್ನು ಸರ್ಕಾರ ಹೊಂದಿದೆ. ರಾಜ್ಯದಲ್ಲಿ 6,000 ಸಾವಿರ ಗ್ರಾಮ ಪಂಚಾಯಿತಿಗಳು ಇದ್ದು, ತಲಾ ಎರಡು ಗ್ರಾಮ ಪಂಚಾಯತಿ ವ್ಯಾಪ್ತಿಗೆ ಒಂದು ಕೆ.ಪಿ.ಎಸ್ ಶಾಲೆ ತೆರೆಯಲಾಗುವುದು. ಈ ಗುರಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸುವ ಆಶಯವನ್ನು ಸಚಿವ ಎಸ್. ಮಧು ಬಂಗಾರಪ್ಪ ವ್ಯಕ್ತಪಡಿಸಿದರು.

ಶಾಲೆಯಿಂದ ಹೊರಗುಳಿಯುವ ಮಕ್ಕಳನ್ನು ಮರಳಿ ಸರ್ಕಾರಿ ಶಾಲೆಗಳಿಗೆ ಕರೆತಂದು ಉಚಿತ ಶಿಕ್ಷಣ ನೀಡುವುದು ಸರ್ಕಾರದ ಗುರಿಯಾಗಿದೆ. ಈ ನಿಟ್ಟಿನಲ್ಲಿ ಎಲ್ಲಾ ಶಾಲೆಗಳ ಮೂಲಭೂತ ಸೌಕರ್ಯಗಳನ್ನು ಹೆಚ್ಚಿಸಲಾಗುತ್ತಿದೆ. ರಾಜ್ಯದ ಹಿಂದುಳಿದ ಪ್ರದೇಶಗಳಲ್ಲಿ ಆಹಾರವು ಶಿಕ್ಷಣದ ಜೊತೆಗೆ ಅತಿ ಮುಖ್ಯ ಅಂಶವಾಗಿದೆ. ಹಾಗಾಗಿ ಶಾಲಾ ಮಕ್ಕಳಿಗೆ ಬಿಸಿ ಊಟ ನೀಡಲಾಗುತ್ತಿದೆ. ಇದರೊಂದಿಗೆ ಉಚಿತ ಸಮವಸ್ತ್ರ, ಮೊಟ್ಟೆ, ಪಠ್ಯ ಪುಸ್ತಕ, ಮೊಟ್ಟೆ ತಿನ್ನದವರಿಗೆ ಶೇಂಗಾ ಚಿಕ್ಕಿಯನ್ನು ಮಕ್ಕಳಿಗೆ ಕೊಡಲಾಗುತ್ತಿದೆ ಎಂದರು.

ಈ ಹಿಂದೆ ಮಕ್ಕಳಿಗೆ ಒಂದು ಮೊಟ್ಟೆ ಕೊಡಲಾಗುತ್ತಿತ್ತು, ಇದೀಗ ಎರಡು ಮೊಟ್ಟೆಯನ್ನು ನೀಡಲಾಗುತ್ತಿದೆ. ಸರ್ಕಾರಿ ಶಾಲೆಗಳಿಗೆ ಉಚಿತ ವಿದ್ಯುತ್ ಘೋಷಣೆಯಾದ ಬಳಿಕ ಬಹಳಷ್ಟು ಬದಲಾವಣೆ ಕಂಡುಬರುತ್ತಿವೆ. ದಾನಿಗಳು ನೀಡಿದ ಕಂಪ್ಯೂಟರ್, ಯು.ಪಿ.ಎಸ್‌ಗಳು ಸದ್ಬಳಕೆಯಾಗುತ್ತಿವೆ. ಹಲವು ಶಾಲೆಗಳಲ್ಲಿ ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ಸಂಜೆಯ ವೇಳೆ ವಿಶೇಷ ತರಗತಿಗಳನ್ನು ಶಿಕ್ಷಕರು ನಡೆಸುತ್ತಿದ್ದಾರೆ. ಶಾಲೆ ಬಿಟ್ಟ ಮಕ್ಕಳನ್ನು ಮರಳಿ ಶಾಲೆಗೆ ಕರೆತಂದು ಶಿಕ್ಷಣ ವ್ಯವಸ್ಥೆ ಬಗ್ಗೆ ವಿಶ್ವಾಸ ಮೂಡಿಸಿ ಗುಣಮಟ್ಟದ ಶಿಕ್ಷಣ ನೀಡಲಾಗುವುದು ಎಂದರು.

ಶಾಲಾ ಮಕ್ಕಳ ಕೈಯಲ್ಲಿ ಶೌಚಾಲಯಗಳನ್ನು ಸ್ವಚ್ಛಗೊಳಿಸುವ ಕುರಿತು ಅನೇಕ ಮಾಧ್ಯಮ ವರದಿಗಳು ಪ್ರಕಟವಾಗಿವೆ. ಇದು ಖೇದಕರ ಸಂಗತಿ. ಪೆನ್ನು ಹಿಡಿಯುವ ಮಕ್ಕಳ ಕೈಯಲ್ಲಿ ಕಸಬರಕೆ ನೀಡುವ ಸಂಸ್ಕೃತಿ ಸರ್ಕಾರದ್ದಲ್ಲ. ಹಾಗೇಯೇ ಶಿಕ್ಷಕರು ಸಹ ಕಸಬರಿಕೆ ಹಿಡಿಯಬಾರದು. ಈ ನಿಟ್ಟಿನಲ್ಲಿ ಶಾಲೆಗಳ ಸ್ವಚ್ಛತೆಗೆ ಸಂಬಂಧಿಸಿದ ಅನುದಾನವನ್ನು ಮುಖ್ಯಮಂತ್ರಿಗಳು ದ್ವಿಗುಣ ಗೊಳಿಸಿದ್ದಾರೆ. ಅಗತ್ಯ ಬಿದ್ದರೆ ಇನ್ನೂ ಹೆಚ್ಚಿನ ಅನುದಾನ ನೀಡುವುದಾಗಿ ಸಚಿವ ಎಸ್.ಮಧು ಬಂಗಾರಪ್ಪ ಆಶ್ವಾಸನೆ ನೀಡಿದರು.

**3 ಹಂತದ ಪರೀಕ್ಷಾ ನೀತಿ ಯಶಸ್ವಿ:** ಶಿಕ್ಷಣ ಸಚಿವರಾದ ಸಂದರ್ಭದಲ್ಲಿ 3 ಹಂತದ ಪರೀಕ್ಷಾ ನೀತಿ ಜಾರಿಗೊಳಿಸಿದ್ದಕ್ಕೆ ಟೀಕೆ, ಟಿಪ್ಪಣಿ ಎದುರಾದವು. ಆದರೆ 3 ಹಂತದ ಪರೀಕ್ಷಾ ನೀತಿ ಯಶಸ್ವಿಯಾಗಿದೆ. ಕಳೆದ ಬಾರಿ ಪಿಯು ಮುಖ್ಯ ಪರೀಕ್ಷೆಯಲ್ಲಿ ಅನುತ್ತೀರ್ಣರಾದ 1.20 ಲಕ್ಷ ಮಕ್ಕಳ ಪೈಕಿ, 42 ಸಾವಿರ ಮಕ್ಕಳು ಪೂರಕ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿ ಶಿಕ್ಷಣವನ್ನು ಮುಂದುವರಿಸಿದ್ದಾರೆ. ಇದರಿಂದ ಡ್ರಾಪ್ ಔಟ್ ಪ್ರಮಾಣ ಕಡಿಮೆಯಾಗಿದೆ.

ಕಡಿಮೆ ಅಂಕ ಗಳಿಸಿದ ಮಕ್ಕಳು ಸಹ, ಪೂರಕ ಪರೀಕ್ಷೆ ಎದುರಿಸಿ ಉತ್ತಮ ಅಂಕ ಗಳಿಸಿದ್ದಾರೆ. ಶೈಕ್ಷಣಿಕ ವ್ಯವಸ್ಥೆಯಲ್ಲಿ ಲೋಪದೋಷಗಳು ಕಡಿಮೆಯಾದಂತೆ ಮರಳಿ 2 ಹಂತದ ಪರೀಕ್ಷಾ ನೀತಿಯನ್ನು ಮರು ಜಾರಿಗೆ ತರಲಾಗುವುದು. ಶಾಲಾ ಮಕ್ಕಳ ಪುಸ್ತಕದ ಹೊರೆ ಇಳಿಸುವ ನಿಟ್ಟಿನಲ್ಲಿ ಪುಸ್ತಕಗಳನ್ನು ವಿಭಾಗಿಸಲಾಗಿದೆ ಎಂದು ಸಚಿವ ಎಸ್.ಮಧು ಬಂಗಾರಪ್ಪ ಹೇಳಿದರು.

**ನೀಟ್ ತರಬೇತಿ ನೀಡಲು ಅನುದಾನಕ್ಕೆ ಬೇಡಿಕೆ:** ವಿದ್ಯಾರ್ಥಿಗಳಿಗೆ ಸರ್ಕಾರಿ ಶಾಲೆಗಳಲ್ಲಿ ಉಚಿತ ನೀಟ್ ತರಬೇತಿ ನೀಡಲು ಅನುದಾನ ಒದಗಿಸುವಂತೆ ಮುಖ್ಯಮಂತ್ರಿಗಳಲ್ಲಿ ಬೇಡಿಕೆ ಸಲ್ಲಿಸಲಾಗಿದೆ. ಇದರಿಂದ ವಿದ್ಯಾರ್ಥಿಗಳು ಖಾಸಗಿ ಕೋಚಿಂಗ್ ಸೆಂಟ□□ಗಳಿಗೆ ತೆರಳಿ ದುಬಾರಿ ಶುಲ್ಕ ನೀಡಿ ತರಬೇತಿ ಪಡೆಯುವುದು ತಪ್ಪಲಿದೆ. ಮುಖ್ಯಮಂತ್ರಿಗಳು ಅನುದಾನ ನೀಡುವ ಭರವಸೆ ಇದೆ ಎಂದು ಸಚಿವ ಮಧು ಬಂಗಾರಪ್ಪ ಹೇಳಿದರು.

**ಪೂರ್ಣಾವಧಿ ಶಿಕ್ಷಕರ ನೇಮಕಕ್ಕೆ ಕ್ರಮ:** ರಾಜ್ಯದಲ್ಲಿ 43 ಸಾವಿರ ಅತಿಥಿ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ. ಖಾಯಂ ಶಿಕ್ಷಕರನ್ನು ನೇಮಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. 12,000 ಪದವಿಧರ ಶಿಕ್ಷಕರ ನೇಮಕಾತಿ ಪ್ರಕ್ರಿಯೆಗೆ ಸುಪ್ರಿಂ ಕೋರ್ಟ್ ನೀಡಿದ ತಡೆಯಾಜ್ಞೆಯನ್ನು ಸೋಮವಾರ ತೆರವು ಗೊಳಿಸಲಾಗಿದೆ. ರಾಜ್ಯ ಅಡ್ವೋಕೇಟ್ ಜನರಲ್ ಬಳಿ ಅಭಿಪ್ರಾಯ ಪಡೆದು ನೇಮಕಾತಿ ಪ್ರಕ್ರಿಯನ್ನು ಪೂರ್ಣಗೊಳಿಸಲಾಗುವುದು. ಚಿತ್ರದುರ್ಗ ಜಿಲ್ಲೆಯಲ್ಲಿ ಕೇವಲ 11 ಶಿಕ್ಷಕರು ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವುದು ಬಾಕಿಯಿದೆ ಎಂದು ತಿಳಿಸಿದರು.



### ಗ್ಯಾರೆಂಟಿ ಯೋಜನೆಗಳು ಯಶಸ್ವಿ

ಗ್ಯಾರೆಂಟಿ ಯೋಜನೆಗಳ ಜಾರಿಯಿಂದ ರಾಜ್ಯ ದಿವಾಳಿಯಾಗುವುದು ಎಂದು ಟೀಕೆಗಳು ಕೇಳಿ ಬಂದಿದ್ದವು. ಆದರೆ ಇದಕ್ಕೆ ವಿರುದ್ಧವಾಗಿ ಗೃಹ ಲಕ್ಷ್ಮೀ, ಗೃಹ ಜ್ಯೋತಿ, ಅನ್ನಭಾಗ್ಯ ಯೋಜನೆಗಳು ಶೇ.92 ರಷ್ಟು ಅರ್ಹ ಜನರಿಗೆ ತಲುಪುತ್ತಿವೆ. ಶಕ್ತಿ ಯೋಜನೆಯಡಿ 150 ಕೋಟಿಗೂ ಅಧಿಕ ಮಹಿಳೆಯರು ರಾಜ್ಯದ ಬಸ್‌ಗಳಲ್ಲಿ ಉಚಿತವಾಗಿ ಸಂಚಾರ ಮಾಡಿದ್ದಾರೆ. ಗ್ಯಾರೆಂಟಿ ಯೋಜನೆಗಳು ಯಶಸ್ವಿಯಾಗಿವೆ ಎಂದು ಸಚಿವ ಮಧು ಬಂಗಾರಪ್ಪ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉಪಸ್ಥಿತರಿದ್ದರು.





ಅಯೋಧ್ಯೆಯಲ್ಲಿ ಶ್ರೀ ರಾಮಲಲ್ಲ ಪ್ರಾಣ ಪ್ರತಿಷ್ಠಾಪನೆ ಅಂಗವಾಗಿ ಚಿತ್ರದುರ್ಗ ನಗರದಲ್ಲಿ ಕಲಾವಿದ ನಾಗರಾಜ್ ಬೇದ್ರೆ ಅವರ ಮಕ್ಕಳ ಕೆನ್ನೆಯ ಮೇಲೆ ಬಿಡಿಸಿದ ಚಿತ್ರ ಎಲ್ಲರ ಗಮನ ಸೆಳೆಯಿತು.

## ಪರಶುರಾಂಪುರ ಹೋಬಳಿಯ ವಿವಿಧೆಡೆ ಹಬ್ಬದ ಸಂಭ್ರಮ

» ಪರಶುರಾಂಪುರ

ಶ್ರೀರಾಮನವಮಿಯ ಸಂಭ್ರಮ, ಸಡಗರ ಎಲ್ಲೆಡೆ ಮನೆ ಮಾಡಿತ್ತು. ಮುಂಜಾನೆಯಿಂದಲೇ ದೇಗುಲಗಳಲ್ಲಿ ರಾಮನನ್ನು ಸ್ಮರಿಸುವ ಭಕ್ತಿಗೀತೆ ಕೇಳುಗರ ಕಿವಿಗೆ ಇಂಪು ನೀಡಿದರೆ, ವಿಶೇಷ ಅಲಂಕಾರ, ಪೂಜೆ ಭಕ್ತರ ಮನಸೂರೆ ಗೊಂಡಿತು. ಸೀತಾರಾಮಾಂಜನೇಯ ದೇವಾಲಯಗಳಂತು ವಿದ್ಯುತ್ ದೀಪ ಹಾಗೂ ಮಾವಿನ ಚಪ್ಪರ ದಿಂದ ಅಲಂಕೃತಗೊಂಡು ಕಂಗೊಳಿಸುತ್ತಿತ್ತು. ಸಾವಿರಾರು ಭಕ್ತರು ಅಣೆಗೆ ತಿಲಕವಿಟ್ಟು ದೇಗುಲದಲ್ಲಿ ನಡೆ ಯುವ ವಿಧಿ, ವಿಧಾನಗಳಲ್ಲಿ ಭಾಗವಹಿಸಿ ಸಂಭ್ರಮಿಸಿದರು.

ಪರಶುರಾಂಪುರ ಗ್ರಾಮ ಸೇರಿದಂತೆ ಹೋಬಳಿಯ ನಾನಾ ಗ್ರಾಮಗಳಲ್ಲಿನ ಶ್ರೀರಾಮ ಹಾಗೂ ಶ್ರೀ ಆಂಜನೇಯ ದೇವಾಲಯಗಳಲ್ಲಿ ಸೋಮವಾರ ವಿಶೇಷ ಪೂಜೆ,ಹೋಮ ಹವನ, ಅಭಿಷೇಕ, ಪಾನಕ, ಪ್ರಸಾದ ಹಾಗೂ ಉತ್ಸವಗಳು ಸಾಂಸ್ಕೃತಿಕ ಕಾರ್ಯಕ್ರಮಗಳು ವಿಜೃಂಭಣೆಯಿಂದ ಜರುಗಿದವು.



ಗ್ರಾಮದ ಕಲ್ಯಾಣದುರ್ಗ ರಸ್ತೆಯ ಆಂಜನೇಯ ದೇವಾಲಯ, ಜಯಣ್ಣ ನಗರದ ಗಣಪತಿ ದೇವಾಲಯ,ಗ್ರಾಪಂ ಸಮೀಪದ ಬಾ ಗುರು ಟೀ ಕುಡಿಯೋಣ ಹಾಗೂ ಬೈಪಾಸ್ ರಸ್ತೆಯ ಶ್ರೀ ರಾಮ ಯುವ ಬಳಗದ ವತಿಯಿಂದ ಪೂಜೆ,ಪಾನಕ ಪ್ರಸಾದ ಹಾಗೂ ಅನ್ನ ಸಂತಾರ್ಪಣೆ ಕಾರ್ಯಗಳು ಸಾಂಗವಾಗಿ ಜರುಗಿದರವು. ಈ ಭಾಗದ ಕ್ಯಾದಿಗುಂಟೆ, ಸಿದ್ದೇಶ್ವರನದುರ್ಗ, ಟಿ.ಎನ್ ಕೋಟೆ,ಪಿ.ಓಬಳಾಪುರ, ದೊಡ್ಡಚೆಲ್ಲೂರು, ಪಿ.ಗೌರೀಪುರ, ಪಿ.ಮಹದೇವಪುರ, ಮತ್ಸಮುದ್ರ,ಚೌಳೂರು, ಪಗಡಲಬಂಡೆ, ಮೋದೂರು, ಮತ್ತಿತರೆ ಕಡೆಗಳಲ್ಲಿ ಶ್ರೀ ಆಂಜನೇಯದೇವಲಯದಲ್ಲಿ ಮುಂಜಾನೆಯಿಂದ ಮಧ್ಯಾಹ್ನದವರೆಗೆ ವಿಶೇಷ, ಪೂಜೆ ಅಭಿಷೇಕ ನಡೆಸಿ ನೆರೆದ ಭಕ್ತರಿಗೆ ಪ್ರಸಾದ ವಿತರಣೆ ನೆರವೇರಿಸಲಾಯಿತು.

ಪಿ.ಓಬನಹಳ್ಳಿಯಲ್ಲಿ ರಾಮಾಂಜನೇಯ ಸ್ತುತಿಯಲ್ಲಿ ಸಂಭ್ರಮಾಚರಣೆ.

## ಕರ್ನಾಟಕ ಗಣಿ, ಭೂ ವಿಜ್ಞಾನ ಇಲಾಖೆ ದೇಶದಲ್ಲಿಯೇ 3ನೇ ಸ್ಥಾನ: ಸಚಿವ ಕಾರ್ಯವೈಖರಿಗೆ ಮೆಚ್ಚುಗೆ



» ದಾವಣಗೆರೆ

ಭಾರತ ದೇಶದಲ್ಲಿಯೇ ಕರ್ನಾಟಕದ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ದೇಶದಲ್ಲಿಯೇ ಮೂರನೇ ಸ್ಥಾನಗಳಿಸಿದೆ. ಮಧ್ಯ ಪ್ರದೇಶದ ಭೂಪಲ್ ನಲ್ಲಿ ನಡೆದ 2 ನೇ ರಾಜ್ಯ ಗಣಿಗಾರಿಕೆ ಮಂತ್ರಿಗಳ ಸಮ್ಮೇಳನ ದಲ್ಲಿ ಭಾಗವಹಿಸಿ ಸಚಿವರಾದ ಎಸ್ ಎಸ್ ಮಲ್ಲಿಕಾರ್ಜುನ ಅವರು ಪ್ರಶಸ್ತಿ ಪಡೆದು ಸನ್ಮಾನಕ್ಕೆ ಪಾತ್ರರಾದರು. ಸಂಸದೀಯ ವ್ಯವಹಾರಗಳ ಗಣಿ ಮತ್ತು ಕಲ್ಲಿದ್ದಲು ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಶಿ ಮಧ್ಯಪ್ರದೇಶದ ಮುಖ್ಯಮಂತ್ರಿ ಮೋಹನ್ ಯಾದವ್ ರವರ ಅಧ್ಯಕ್ಷತೆಯಲ್ಲಿ ಸಮ್ಮೇಳನದಲ್ಲಿ ಈ ಸನ್ಮಾನ ಮಾಡಿ ಗೌರವಿಸಲಾಯಿತು.

ದೇಶದಲ್ಲೇ ಮೂರನೇ ಸ್ಥಾನವನ್ನು ಪಡೆದುಕೊಂಡಿರುವುದಕ್ಕೆ ಸಿಎಂ ಮೋಹನ್ ಯಾದವ್ ಹಾಗೂ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಜಿ ಎಸ್ ಎಸ್ ಮಲ್ಲಿಕಾರ್ಜುನ್ ರವರಿಗೆ ವಿಶೇಷವಾಗಿ ಶುಭ ಹಾರೈಸಿದರು. ಕರ್ನಾಟಕದ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಕಾರ್ಯಸಾಧನೆಗೆ ಎಸ್ ಎಸ್ ಮಲ್ಲಿಕಾರ್ಜುನ ಅವರು ಇಡೀ ಇಲಾಖೆ ಅಧಿಕಾರಿಗಳ ಕಾರ್ಯವೈಖರಿಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಕರ್ನಾಟಕ ಗಣಿ ಮತ್ತು ಭೂವಿಜ್ಞಾನ ಇಲಾಖೆಯು 2022–23ನೇ ಸಾಲಿನ ಖನಿಜ ಬ್ಲಾಕ್‌ಗಳ ಹರಾಜಿನಲ್ಲಿ 3ನೇ ಬಹುಮಾನ ಪಡೆದುಕೊಂಡು ಉತ್ತಮ ಸಾಧನೆಯನ್ನು ಮಾಡಿತ್ತು. ಈ ಕಾರಣ ಈ ಗೌರಕ್ಕೆ ಕಾರಣವಾಗಿದೆ.ಈ ಸಂದರ್ಭದಲ್ಲಿ ಕೇಂದ್ರದ ಹಿರಿಯ ಅಧಿಕಾರಿಗಳು ಹಾಗೂ ಮಧ್ಯಪ್ರದೇಶದ ಹಿರಿಯ ಅಧಿಕಾರಿಗಳು ಮತ್ತು ನಿರ್ದೇಶಕರಾದ ಗಿರೀಶ್ ಕಾರ್ಯಕ್ರಮ ವೇಳೆ ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

## ಹೊಸದುರ್ಗ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕನ್ನಡ ಮನಸುಗಳ ಸಮ್ಮಿಲನ ಕಾರ್ಯಕ್ರಮ

# ರ್‍ಯಾಂಕ್ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನಿಸಿ, ಗೌರವ

» ಹೊಸದುರ್ಗ

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸ್ನಾತಕೋತ್ತರ ಕನ್ನಡ ವಿಭಾಗದಲ್ಲಿ ದ್ವಿತೀಯ ವರ್ಷದ ಅಂತಿಮ ಪರೀಕ್ಷೆಯಲ್ಲಿ ದಾವಣಗೆರೆ ವಿಶ್ವವಿದ್ಯಾನಿಲಯಕ್ಕೆ 9ನೇ ರ□□□ಂಕ್ ಪಡೆದ ವಿದ್ಯಾರ್ಥಿನಿ ಟಿ. ಯಶೋಧ ಮತ್ತು ನೇಟ್ ಪರೀಕ್ಷೆಯಲ್ಲಿ ಅರ್ಹತೆ ಪಡೆದ ವಿದ್ಯಾರ್ಥಿ ಮಂಜುನಾಥ್ ಇವರುಗಳನ್ನು ಕಾಲೇಜಿನಲ್ಲಿ ಮಂಗಳವಾರ ಆಯೋಜಿಸಿದ್ದ ಕನ್ನಡ ಮನಸ್ಸುಗಳ ಸಮ್ಮಿಲನ ಕಾರ್ಯಕ್ರಮದಲ್ಲಿ ಸನ್ಮಾನಿಸಿ, ಗೌರವಿಸಲಾಯಿತು.

ಸ್ನಾತಕೋತ್ತರ ಕನ್ನಡ ವಿಭಾಗದಲ್ಲಿ 2024 ನೇ ಸಾಲಿನ ಪ್ರಥಮ ಎಂಎ ವಿದ್ಯಾರ್ಥಿಗಳಿಗೆ ದ್ವಿತೀಯ ಹೆಮ್ಮೆ ವಿದ್ಯಾರ್ಥಿಗಳಿಂದ ಸ್ವಾಗತ ಕಾರ್ಯಕ್ರಮ ಮತ್ತು ಕನ್ನಡ ಮನಸುಗಳ ಸಮ್ಮಿಲನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮವನ್ನು ಗಿಡಕ್ಕೆ ನೀರೆರೆಯುವ ಮತ್ತು ಬೀಸುವ ಕಲ್ಲು ತಿರುಗಿಸುವ ಮೂಲಕ ಉದ್ಘಾಟಿಸಲಾಯಿತು. ಇದೇ ಸಂದರ್ಭದಲ್ಲಿ ಕನ್ನಡ ಭಾಷೆ ಮತ್ತು ಸಾಹಿತ್ಯವನ್ನು ಕುರಿತು ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು.



ಇದೇ ಸಂದರ್ಭದಲ್ಲಿ ಪ್ರಾಚಾರ್ಯರಾದ ಭ್ರಮರಂಬ ಮಾತನಾಡಿ, ನಾವಾಡುವ ಕನ್ನಡ ಭಾಷೆ, ಮಾತಿನ ಭಾಷೆಯಾಗದೆ, ಹೃದಯದ ಭಾಷೆಯಾಗಬೇಕು. ಮನಸ್ಸಿನ ಎಂತಹ ನೋವನ್ನು ಗುಣಮುಖ ಪಡಿಸಬಲ್ಲ ಶಕ್ತಿ ಸಾಹಿತ್ಯಕ್ಕಿದ್ದು, ಕನ್ನಡ ಸಾಹಿತ್ಯವಂತೂ ಬಹಳ ಸಮೃದ್ಧವಾಗಿದೆ. ನಮ್ಮ ಕಾಲೇಜಿನ ಸ್ನಾತಕೋತರ ಕನ್ನಡ ವಿಭಾಗದ ವಿದ್ಯಾರ್ಥಿಗಳು ಒಳ್ಳೆಯ ಮಾದರಿ ಕಾರ್ಯಕ್ರಮಗಳನ್ನು ಮಾಡುತ್ತಿರುವುದು ಸಂತಸ ತಂದಿದೆ. ಮುಂದಿನ ದಿನಗಳಲ್ಲಿ ಈ ಕಾಲೇಜಿಗೆ ಒಳ್ಳೆಯ ಭವಿಷ್ಯವಿದೆ. ಕಾಲೇಜು ನ್ಯಾಕ್ ಗೆ ಒಳಪಡುತ್ತಿದೆ. ಅಭಿವೃದ್ಧಿಗೆ ಎಲ್ಲಾ ವಿದ್ಯಾರ್ಥಿಗಳ ಸಹಕಾರ ಬಹಳ ಅಗತ್ಯವಾಗಿದೆ ಎಂದು ಹೇಳಿದರು. ಈ ವೇಳೆ ಕಾರ್ಯಕ್ರಮದಲ್ಲಿ ಸಹಾಯಕ ಪ್ರಾಧ್ಯಾಪಕರಾದ ಧನಂಜಯ್, ಸುಬ್ರಮಣ್ಯ ಶೆಟ್ಟಿ, ಶೈಲೇಂದ್ರ, ಗ್ರಂಥಪಾಲಕರಾದ ದಯಗುಣೇಶ್, ಅತಿಥಿ ಉಪನ್ಯಾಸಕರಾದ ಗೋವಿಂದರಾಜು, ಮಂಜಪ್ಪ, ಜಕಣಚಾರಿ, ಬಸವರಾಜು ಮತ್ತು ಎಂ.ಟಿ. ಮಂಜುನಾಥ್ ಸೇರಿದಂತೆ ಎಂ.ಎ, ದ್ವಿತೀಯ ಎಂ.ಎ ಮತ್ತು ಹಿರಿಯ ವಿದ್ಯಾರ್ಥಿಗಳಿದ್ದರು.

## ಫಾಸ್ಟ್ ನ್ಯೂಸ್

### ಛಾಯಾಗ್ರಾಹಕರ ಸಂಘದ ನೂತನ ಜಿಲ್ಲಾ ಅಧ್ಯಕ್ಷರ ಆಯ್ಕೆ



» **ಹೊಸದುರ್ಗ**

ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ಚಿತ್ರದುರ್ಗ ಜಿಲ್ಲಾ ಛಾಯಾಗ್ರಾಹಕರ ಸಂಘದ ಸಭೆಯಲ್ಲಿ ಚಿತ್ರದುರ್ಗ ಜಿಲ್ಲಾ ಛಾಯಾಗ್ರಾಹಕರ ಸಂಘದ ನೂತನ ಜಿಲ್ಲಾ ಅಧ್ಯಕ್ಷರಾಗಿ ಸೈಯದ್ ರಹಮತ್ ಉಲ್ಲ (ಮುನ್ನ) ಅವರನ್ನ ಆಯ್ಕೆ ಮಾಡಲಾಯಿತು. ಪ್ರಧಾನ ಕಾರ್ಯದರ್ಶಿಯಾಗಿ ನಾಗಣ್ಣ, ಖಜಾಂಚಿಯಾಗಿ ಊ.ಅ.ಕುಮಾರ್, ಉಪಾಧ್ಯಕ್ಷರಾಗಿ ರಾಮಚಂದ್ರರೆಡ್ಡಿ ಹಾಗೂ ಕಾಂತರಾಜ್ ಮತ್ತು ಗೌರವಾಧ್ಯಕ್ಷರಾಗಿ ಜೆ.ಸಿ.ಗಂಗಾಧರ್ ಅವರನ್ನ ಆಯ್ಕೆ ಮಾಡಲಾಯಿತು.

### ದಗ್ಗೆ ಗ್ರಾಮದಲ್ಲಿ ಶ್ರೀರಾಮನಿಗೆ ಪೂಜೆ



» **ಹೊಳಲ್ಕೆರೆ**

ಐದುನೂರು ವರ್ಷದ ತಿಕ್ಕಾಟ, ಕೋರ್ಟ್ ವ್ಯಾಜ್ಯದ ನಂತರ ಅಯೋಧ್ಯೆಯಲ್ಲಿ ದೇಶದ ಪ್ರಧಾನಿ ನರೇಂದ್ರಮೋದಿರವರು ಶ್ರೀರಾಮ ಚಂದ್ರನ ಪ್ರಾಣ ಪ್ರತಿಷ್ಠಾಪನೆ ಉದ್ಘಾಟಿಸಿರುವುದಕ್ಕೆ ಹೊಳಲ್ಕೆರೆ ತಾಲ್ಲೂಕು ಬ್ರಹ್ಮಪುರ(ದಗ್ಗೆ)ಯಲ್ಲಿ ಮನೆ ಮನೆಯಲ್ಲಿ ಹಬ್ಬದ ರೀತಿಯಲ್ಲಿ ಸಂಭ್ರಮಿಸಲಾಯಿತು. ರಾಮನಿಗೆ ಸಂಜೆ ವಿಶೇಷ ಪೂಜೆ ಸಲ್ಲಿಸಿ ಶ್ರೀರಾಮ ಭಾವಚಿತ್ರದೊಂದಿಗೆ ಗ್ರಾಮದಲ್ಲಿ ಪ್ರತಿಯೊಂದು ಕೇರಿಗೂ ಸಂಚರಿಸಿ ಭಜನೆ ಮಾಡುವ ಮೂಲಕ ಶ್ರದ್ಧಾ ಭಕ್ತಿ ಸಮರ್ಪಿಸಲಾಯಿತು.ಬಿಜೆಪಿ. ಮಾಧ್ಯಮ ವಕ್ತಾರ ದಗ್ಗೆಶಿವಪ್ರಕಾಶ್ ಮಾತನಾಡಿ ದೇಶದ ಪ್ರಧಾನಿ ನರೇಂದ್ರಮೋದಿರವರು ಕಡಿಮೆ ಅವಧಿಯಲ್ಲಿಯೇ ಅಯೋಧ್ಯೆಯಲ್ಲಿ ರಾಮ ಮಂದಿರವನ್ನು ಉದ್ಘಾಟಿಸಿ ಪ್ರತಿಯೊಬ್ಬ ಭಾರತೀಯನ ಕನಸನ್ನು ಸಾಕಾರಗೊಳಿಸಿದ್ದಾರೆ. ದಗ್ಗೆ ಪುಟ್ಟ ಗ್ರಾಮವಾಗಿದ್ದರೂ ಎಲ್ಲರಲ್ಲೂ ರಾಮನ ಮೇಲೆ ಅಪಾರವಾದ ಭಕ್ತಿಯಿದೆ. ಶ್ರೀರಾಮ ಮಂದಿರ ಸಮಸ್ತ ಹಿಂದೂವನ್ನು ಒಗ್ಗೂಡಿಸಿದೆ. ಶ್ರೀರಾಮನಲ್ಲಿದ್ದ ಆದರ್ಶ ಗುಣಗಳನ್ನು ಪ್ರತಿಯೊಬ್ಬರು ಮೈಗೂಡಿಸಿಕೊಳ್ಳಬೇಕು. ಆಗ ಮಾತ್ರ ರಾಜರಾಜ್ಯವಾಗುವುದರಲ್ಲಿ ಸಂದೇಹವಿಲ್ಲ ಎಂದು ಹೇಳಿದರು.ದೇವರಾಜ್, ಮಿಲ್ಟ್ರಿ ನಾಗರಾಜಪ್ಪ, ಎಂ.ಎಸ್.ಲೋಕೇಶ್ವರಪ್ಪ, ಪಿ.ಮಧು, ಅಗೆದಳ್ಳಿ ಮಂಜಪ್ಪ, ಸಿದ್ದಲಿಂಗಪ್ಪ, ಕುಮಾರಪ್ಪ, ಪೂಜಾರ್ ಜಯಣ್ಣ, ಮಹಂತೇಶ್ವರಪ್ಪ, ಸುನೀಲ್‌ಕುಮಾರ್, ಆರ್.ಶಶಿಧರ, ಬಿ.ನಾಗರಾಜ, ರಘು, ಕುಮಾರ್, ಭೈರೇಶ, ಎಸ್.ಮಧನ್‌ಕುಮಾರ್, ಸಿ.ನಾಗರಾಜಪ್ಪ, ಚಂದ್ರಣ್ಣ, ರಾಜಣ್ಣ, ಬಸವರಾಜಪ್ಪ, ತಿಪ್ಪೇಶ್, ಮಹೇಶ, ಪಾರ್ವತಮ್ಮ, ರಾಜಮ್ಮ, ಗೌರಮ್ಮ, ಗೀತಮ್ಮ, ವಿಜಯಮ್ಮ, ಸುಮವ್ವ ಸೇರಿದಂತೆ ಇನ್ನಿತರರು ರಾಮನ ವಿಶೇಷ ಪೂಜೆಯಲ್ಲಿ ಪಾಲ್ಗೊಂಡಿದ್ದರು.

### ಕಾರ್ಯನಿರತ ದಿನಪತ್ರಿಕೆ ಸಂಪಾದಕರ ಸಂಘದ ಕೇಂದ್ರ ಸಮಿತಿಗೆ ವಾಸುದೇವ ನೇಮಕ

» **ಬೆಂಗಳೂರು**



ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಕೇಂದ್ರ ಸಂಘದ ಕಾರ್ಯಕಾರಿ ಸಮಿತಿಗೆ ನಾಮ ನಿರ್ದೇಶನ ಸದಸ್ಯರಾಗಿ ವಿಸ್ಮಯವಾಣಿ ದಿನಪತ್ರಿಕೆ ಸಂಪಾದಕರಾದ ಡಾ.ಬಿ.ವಾಸುದೇವ ಅವರನ್ನು ನೇಮಕ ಮಾಡಲಾಗಿದೆ. ಜಿಲ್ಲೆಯಲ್ಲಿ ಮತ್ತು ರಾಜ್ಯದ ಇತರೆ ಜಿಲ್ಲೆಗಳಲ್ಲಿ ಜಿಲ್ಲಾ ಘಟಕಗಳನ್ನು ರಚಿಸಿ, ಇನ್ನಿತರೆ ಪತ್ರಿಕೆಗಳ ಸಂಪಾದಕರನ್ನು ಈ ಸಂಘಕ್ಕೆ ನೇಮಕ ಮಾಡಿಕೊಳ್ಳುವಂತೆ ರಾಜ್ಯಾಧ್ಯಕ್ಷ ಎ.ಸಿ.ತಿಪ್ಪೇಸ್ವಾಮಿ ಅವರು ಪ್ರಕಟಣೆಯಲ್ಲಿ ಸೂಚಿಸಿದ್ದಾರೆ.

### ಅವಧಿ ವಿಸ್ತರಣೆ

» **ದಾವಣಗೆರೆ**

ಪ್ರಸಕ್ತ ಸಾಲಿನಲ್ಲಿ ರಾಜ್ಯದಲ್ಲಿರುವ ನೋಂದಾಯಿತ ಮದರಸಾಗಳಿಗೆ ಔಪಚಾರಿಕ ಮತ್ತು ಗಣಕೀಕೃತ ಶಿಕ್ಷಣವನ್ನು ನೀಡಲು ಮದರಸಾ ಸಂಸ್ಥೆಗಳಿಂದ ಆನ್‌ಲೈನ್ ಮೂಲಕ ಅರ್ಜಿ ಅಲ್ಲಿಸುವ ಅವಧಿಯನ್ನು ಜ.31 ರವರೆಗೆ ವಿಸ್ತರಿಸಲಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

# ಮಹಿಳೆಗೆ ಸಂಘರ್ಷವಿಲ್ಲದ ಬದುಕಿಲ್ಲ, ಆದರೂ ಎಲ್ಲಾ ಕ್ಷೇತ್ರಗಳಲ್ಲಿ ಮುಂಚೂಣಿ; ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

» **ದಾವಣಗೆರೆ**

ಮಹಿಳೆ ಎಲ್ಲಾ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿದ್ದರೂ ಸಹ ಸಂಘರ್ಷವಿಲ್ಲದೇ ಸುಲಭವಾಗಿ ಏನು ಪಡೆದುಕೊಳ್ಳಲು ಸಾಧ್ಯವಾಗಿಲ್ಲ, ಈ ನಿಟ್ಟಿನಲ್ಲಿ ಮಹಿಳೆಯರಿಗೆ ಸಮಾನ ಅವಕಾಶ ಕಲ್ಪಿಸಿದ ಬಸವಣ್ಣ ಮತ್ತು ಡಾ; ಬಿ.ಆರ್.ಅಂಬೇಡ್ಕರ್ ಅವರನ್ನು ನೆನೆಯಬೇಕೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮಿ ಹೆಬ್ಬಾಳ್ಕರ್ ತಿಳಿಸಿದರು.

ಅವರು ಮಂಗಳವಾರ ನಗರದ ಗುಂಡಿ ಮಹಾದೇವಪ್ಪ ಕಲ್ಯಾಣ ಮಂಟಪದಲ್ಲಿ ಆತ್ಮಿ ಅಸೋಸಿಯೇಷನ್ ಹಮ್ಮಿಕೊಂಡಿದ್ದ 'ಸತ್ವಸಂಗಮ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಹಿಂದಿನ ದಿನಮಾನಗಳಿಗೆ ಹೋಲಿಸಿದರೆ ಇಂದು ಮಹಿಳೆ ಸ್ವಾವಲಂಬಿಯಾಗಿದ್ದಾಳೆ. ಮಹಿಳೆ ಮುಂದೆ ಬರಬೇಕು ಎಂದು ಎಲ್ಲರೂ ಹೇಳುತ್ತಾರೆ. ಆದರೆ, ಸಾಕಷ್ಟು ಶ್ರಮವಹಿಸಿ ಮುಂದೆ ಬಂದರೂ ಹಿಂದೆ ತಳ್ಳುತ್ತಾರೆ. ಇದಕ್ಕೆ ಸರಿಸಮಾನರಾಗಿ ನಿಲ್ಲಬೇಕಾಗಿದೆ ಎಂದರು. ಇಂದು ತಾಂತ್ರಿಕತೆಯಲ್ಲಿ ಸಾಕಷ್ಟು ಮುಂದೆ ಇದೆ, ಆದರೆ ಮನುಷ್ಯತ್ವ ರೂಪಿಸಲು ತಾಂತ್ರಿಕತೆಯಿಂದ ಸಾಧ್ಯವಾಗುವುದಿಲ್ಲ. ಮನುಷ್ಯತ್ವದಿಂದ ಮನುಷ್ಯರಿಗಾಗಿ ಸೇವೆ ಮಾಡುವ ಇಲಾಖೆ ಮಹಿಳಾ ಮತ್ತು



ಮಕ್ಕಳ ಅಭಿವೃದ್ಧಿ ಇಲಾಖೆಯಾಗಿದ್ದು ಇಲ್ಲಿ ಮಗು ಗರ್ಭಾವಸ್ಥೆಯಿಂದ ಜನನವಾಗಿ ಬೆಳೆದು ಮರಣ ಹೊಂದುವವರೆಗೂ ಇಲಾಖೆ ಸೇವೆ ಮಾಡುತ್ತದೆ. ಈ ನಿಟ್ಟಿನಲ್ಲಿ ಇಲಾಖೆ ಕಾರ್ಯಕ್ರಮದ ಜವಾಬ್ದಾರಿ ಹೆಚ್ಚಿರುತ್ತದೆ ಎಂದರು. ದೇಶ ಕಟ್ಟುವ, ಸುಭದ್ರವಾಗಿಸುವ ಜವಾಬ್ದಾರಿ ಮಹಿಳೆಯರ ಹೆಗಲ ಮೇಲಿದೆ. ಮಕ್ಕಳಿಗೆ ಜನ್ಮ ನೀಡುವ ಮಹಿಳೆಯರು ಅವರಿಗೆ ಉತ್ತಮ ಶಿಕ್ಷಣ, ಸಂಸ್ಕಾರ ನೀಡುವ ಜತೆಗೆ ಅವರನ್ನು ಆರೋಗ್ಯವಂತರನ್ನಾಗಿ ಬೆಳೆಸುವ ಮೂಲಕ ದೇಶದ ಭವಿಷ್ಯವನ್ನು ಭದ್ರಗೊಳಿಸುತ್ತಿದ್ದಾರೆ. ಇದರಿಂದ ದೇಶವನ್ನು ಸಮೃದ್ದಿಯತ್ತ ತೆಗೆದುಕೊಂಡು ಹೋಗಲು ಸಾಧ್ಯವಾಗುತ್ತದೆ ಎಂದರು.

ವಿಶೇಷಚೇತನರಿಗೆಶೇ5ರಷ್ಟುಅನುದಾನ; ಎಲ್ಲಾ ಇಲಾಖೆಗಳಲ್ಲಿ ವಿಶೇಷಚೇತನರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ಶೇ 5 ರಷ್ಟು ಅನುದಾನ ಮೀಸಲಿರಿಸಲಾಗುತ್ತದೆ. ವಿಶೇಷಚೇತನರಿಗೆ ಬೇಕಾದ ಸೌಲಭ್ಯಗಳನ್ನು ಎಲ್ಲಾ ಇಲಾಖೆಗಳು ಕಲ್ಪಿಸಿಕೊಡಬೇಕಾಗಿರುವುದು ಅವರ ಜವಾಬ್ದಾರಿಯಾಗಿದೆಎಂದರು.ಸ್ವಾವಲಂಬಿ ಬದುಕಿಗಾಗಿ ಪಂಚ ಗ್ಯಾರಂಟಿ; ಸರ್ಕಾರ ನೀಡಿದ 5 ಗ್ಯಾರಂಟಿಗಳಿಂದ ಮಹಿಳೆ ಇಂದು ಸ್ವಾವಲಂಬಿಯಾಗಿ ಬದುಕಲು ಸಾಧ್ಯವಾಗುತ್ತಿದೆ. ಏಕೆಂದರೆ ಮನೆಯ ಖರ್ಚುವೆಚ್ಚಗಳು ಕಡಿಮೆಯಾಗಿದ್ದು ಮನೆ ನಿರ್ವಹಣೆ ಸುಲಭವಾಗಿದೆ. ಗೃಹಲಕ್ಷ್ಮಿ ಯೋಜನೆಯ ಮೂಲಕ ಯಜಮಾನಿಗೆ ವರ್ಷಕ್ಕೆ 24 ಸಾವಿರ ರೂ.ಗಳ ಜೊತೆಗೆ ಉಚಿತ ಸಾರಿಗೆ ವ್ಯವಸ್ಥೆ, ವಿದ್ಯುತ್ ಉಚಿತ, ಅನ್ನಭಾಗ್ಯ ಮತ್ತು ಪದವಿ, ಡಿಪ್ಲಮೋ ಮಕ್ಕಳಿದ್ದಲ್ಲಿ ಯುವನಿಧಿ ಸಿಗಲಿದ್ದು ಇದರಿಂದ ಆರ್ಥಿಕವಾಗಿ ಮುಂದೆ ಬರಲು ಸಾಧ್ಯವಾಗುತ್ತದೆ ಎಂದರು.

ಶಾಸಕರಾದ ಡಾ; ಶಾಮನೂರು ಶಿವಶಂಕರಪ್ಪ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿ ಮಹಿಳೆಯರ ಸಂಕಷ್ಟಗಳನ್ನು ಅರಿತಿದ್ದ ಬಸವಣ್ಣನವರು ಅವರಿಗೆ ಅನುಭವ ಮಂಟಪದಲ್ಲಿ ಪುರುಷರಿಗೆ ಸಮಾನವಾದ ಸ್ಥಾನಮಾನ ಹಾಗೂ ಸಂಪೂರ್ಣ ಸ್ವಾತಂತ್ರ್ಯ ನೀಡಿದ ಮೊದಲ ವ್ಯಕ್ತಿಯಾಗಿದ್ದರು. ಇಂದು ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲೂ ಮುಂಚೂಣಿಯಲ್ಲಿದ್ದಾರೆ. ಮಹಿಳೆಯರಿಗೆ ಎಲ್ಲಾ ಕ್ಷೇತ್ರಗಳಲ್ಲಿ ಸಮಾನ ಅವಕಾಶ, ಹಕ್ಕುಗಳಿದ್ದು ಮಹಿಳೆಯರಿಗೆ ಮಾನಸಿಕ, ದೈಹಿಕ ಹಿಂಸೆ ನೀಡಿದವರಿಗೆ ನ್ಯಾಯಾಲಯಗಳು ಇನ್ನೂ ಹೆಚ್ಚಿನ ಕಠಿಣ ಶಿಕ್ಷೆ ನೀಡಬೇಕೆಂದರು. ಸಮಾರಂಭದಲ್ಲಿ ಎಸ್.ಎಸ್. ಕೇರ್ ಟ್ರಸ್ಟ್ ಆಜೀವ ಟ್ರಸ್ಟಿ ಡಾ. ಪ್ರಭಾ ಮಲ್ಲಿಕಾರ್ಜುನ್ ಮಾತನಾಡಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ವಾಸಂತಿ ಉಪ್ಪಾರ್, ವಿಕಲಚೇತನರ ಇಲಾಖೆ ಅಧಿಕಾರಿ ಕೆ.ಕೆ. ಪ್ರಕಾಶ್, ರಾಷ್ಟ್ರ ಪ್ರಶಸ್ತಿ ವಿಜೇತ ವಿಕಲಚೇತನ ಘನಶ್ಯಾಮ್ ಟಿ. ಬಾಂಡಗೆ, ಬಿ.ಎಸ್ಸಿ ಸಂಸ್ಥೆಯ ಬಿ.ಸಿ. ಚಂದ್ರಶೇಖರ್, ಆತ್ಮಿ ಅಧ್ಯಕ್ಷೆ ಬಿ. ಪ್ರಸನ್ನ, ಕಾರ್ಯದರ್ಶಿ ಶೋಭಾ ಶಿವರಾಜ್ ಇತರರಿದ್ದರು.

# ಬರ: ಎಲ್ಲಾ ರೈತರ ಖಾತೆಗೂ ಬರಪರಿಹಾರ ಮೊತ್ತವನ್ನು ಜಮಾ ಮಾಡಲಾಗುವುದು

» **ಹೊಸದುರ್ಗ**

2023-24ನೇ ಸಾಲಿನಲ್ಲಿ ಬರಗಾಲ ಘೋಷಣೆ ಆಗಿರುವುದರಿಂದ ಎಲ್ಲಾ ರೈತರ ಖಾತೆಗೂ ಬರಪರಿಹಾರ ಮೊತ್ತವನ್ನು ಜಮಾ ಮಾಡಲಾಗುವುದು ಎಂದು ಜಂಟಿ ಕೃಷಿ ನಿರ್ದೇಶಕ ಮಂಜುನಾಥ ತಿಳಿಸಿದರು.

ತಾಲೂಕಿನ ಶ್ರೀರಾಂಪುರ ಹೋಬಳಿ, ಬಲ್ಲಾಳಸಮುದ್ರದ ಬಿ.ವೈ.ಲಕ್ಷ್ಮೀನಾಯ್ಡು ಬಿನ್ ಯಂಗಯ್ಯ ನಾಯ್ಡು, ಇವರ ಜಮೀನಿನಲ್ಲಿ 2023-24ನೇ ಸಾಲಿನ ಕೃಷಿಭಾಗ್ಯ ಯೋಜನೆಯ ಕೃಷಿಹೊಂಡ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಸೂಕ್ಷ್ಮನೀರಾವರಿ ಘಟಕ ಹಾಗೂ ಕೃಷಿ ಯಾಂತ್ರಿಕರಣ ಯೋಜನೆಯಡಿ ರೈತರು ಅರ್ಜಿ ಸಲ್ಲಿಸಿ ಯೋಜನೆಯ ಸದುಪಯೋಗ ಪಡಿಸಿಕೊಳ್ಳಲು ತಿಳಿಸಿದರು.

ಹೊಸದುರ್ಗ ತಾಲ್ಲೂಕು ಇಡೀ ರಾಜ್ಯದಲ್ಲಿಯೇ ಅತಿ ಹೆಚ್ಚು ಸಿರಿಧಾನ್ಯವನ್ನು ಬೆಳೆಯುವ ಪ್ರದೇಶವಾಗಿದ್ದು, 2023-24ನೇ ಸಾಲನ್ನು ಅಂತರಾಷ್ಟ್ರೀಯ ಸಿರಿಧಾನ್ಯ ವರ್ಷವೆಂದು ಘೋಷಣೆಯಾಗಿರುತ್ತದೆ. ಈ ನಿಟ್ಟಿನಲ್ಲಿ ಸಿರಿಧಾನ್ಯ ಬೆಳೆದ ಎಲ್ಲಾ ರೈತರ ಖಾತೆಗೆ ಮುಂದಿನ ಮಾಹೆಯಲ್ಲಿ ಪ್ರೋತ್ಸಾಧನ ವರ್ಗಾವಣೆ ಮಾಡಲಾಗುವುದೆಂದು ತಿಳಿಸಿದರು.

ಸಹಾಯಕ ಕೃಷಿ ನಿರ್ದೇಶಕ ಸಿ.ಎಸ್. ಈಶ ಮಾತನಾಡಿ ಮಳೆ ನೀರನ್ನು ವ್ಯರ್ಥ



ಮಾಡದೇ ಆಯ್ದ ಸ್ಥಳದಲ್ಲಿ ಕೃಷಿ ಹೊಂಡ ತೆಗೆದು, ಜಲ ಸಂಗ್ರಹಿಸಿ, ಬೆಳೆಗಳ ಸಂದಿಗ್ಧ ಹಂತಗಳಲ್ಲಿ ರಕ್ಷಣಾತ್ಮಕ ನೀರಾವರಿ ಒದಗಿಸುವ ಉದ್ದೇಶದಿಂದ ರಾಜ್ಯ ಸರಕಾರ 2023-24 ನೇ ಸಾಲಿನಲ್ಲಿ ಕೃಷಿ ಭಾಗ್ಯ ಯೋಜನೆಯನ್ನು ಮಂರುಜಾರಿಗೊಳಿಸಿಲಾಗಿದ್ದು.ಸದರಿ ಯೋಜನೆಯಡಿ 702 ಆಸಕ್ತ ರೈತರ ಅರ್ಜಿಗಳು ಸ್ವಿಕೃತವಾಗಿದ್ದು. ಅರ್ಜಿ ಸಲ್ಲಿಸಲಾಗಿದ್ದ ಆಸಕ್ತ ರೈತರ ಅರ್ಜಿಗಳನ್ನು ಪರಿಶೀಲಿಸಿ ಈ ಹಿಂದೆ ಯಾವುದೇ ಯೋಜನೆಗಳಲ್ಲಿ ಹಾಗೂ ಕೃಷಿ ಭಾಗ್ಯ ಯೋಜನೆಯಡಿ ಬರುವ ಯಾವುದೇ ಘಟಕಗಳಿಗೆ ಸಹಾಯಧನ ಪಡೆದಿಲ್ಲದ ರೈತರ ಅರ್ಜಿಗಳಗೆ ಜೇಷ್ಠತಾ ಆಧಾರದ ಮೇಲೆ 70 ರೈತರ ಅರ್ಜಿಗಳಿಗೆ ಹೊಸದುರ್ಗ ತಾಲ್ಲೂಕಿನ ಗುರಿಯನ್ವಯ ಕಾರ್ಯಾದೇಶವನ್ನು ನೀಡಲಾಗಿದ್ದು ಈ ರೀತಿ ಕಾರ್ಯಾದೇಶ ನೀಡಲಾಗಿರುವ ರೈತರು ಇಲಾಖೆಯ ಮಾರ್ಗಸೂಚಿಯಂತೆ ಕಾಮಗಾರಿಯನ್ನು ಕೈಗೊಳ್ಳಲು ತಿಳಿಸಿದರು.

ಶಾಸಕ ಬಿ.ಜಿ.ಗೋವಿಂದಪ್ಪ 2023-24ನೇ ಸಾಲಿನ ಕೃಷಿಭಾಗ್ಯ ಯೋಜನೆಯ ಕೃಷಿಹೊಂಡ ಭೂಮಿ ಪ್ರಜೆ ನೆರವೇರಿಸಿದರು. ಕಾರ್ಯಕ್ರಮದಲ್ಲಿ ರೈತರಾದ ಲಕ್ಷ್ಮೀಪತಿನಾಯ್ಡು, ವಿ.ಎಸ್.ಎಸ್. ಎನ್. ಅಧ್ಯಕ್ಷ ರಂಗರಾವ್, ಕೆ.ಎಂ.ಎಫ್.ನ ಅಧ್ಯಕ್ಷ ತಾರನಾಥ್, ಮಾಜಿ ಗ್ರಾ.ಪಂ. ಸದಸ್ಯ ವಿಜಯಕುಮಾರ್, ಕೆಲ್ಲೋಡುಮಂಜುನಾಥ್, ಸಹಾಯಕ ಕೃಷಿ ನಿರ್ದೇಶಕರಾದ ಸಿ.ಎಸ್. ಈಶ, ಕೃಷಿ ಅಧಿಕಾರಿಗಳಾದ ಶ್ರೀಮತಿ ಮಂಜುಳ ಮಳಗಿ ಹಾಗೂ ಆತ್ಮ ಸಿಬ್ಬಂದಿಯಾದ ಕುಮಾರಿ ಕವಿತ ಹಾಗೂ ಗ್ರಾಮಸ್ಥರು ಹಾಜರಿದ್ದರು.



**ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮತ್ತು ಕೆರೆ ಅಭಿವೃದ್ಧಿ ಸಮಿತಿ ಹೊಸದುರ್ಗ ಇವರ ಸಂಯುಕ್ತ ಆಶ್ರಯದಲ್ಲಿ ತಾಲೂಕಿನ ದೊಡ್ಡ ಬ್ಯಾಲದಕೆರೆಯಲ್ಲಿ ಗ್ರಾಮದಲ್ಲಿ ಕೆರೆ ಹಸ್ತಾಂತರ ಕಾರ್ಯಕ್ರಮವನ್ನು ಪ್ರಾದೇಶಿಕ ನಿರ್ದೇಶಕರಾದ ಗೀತಾ ಉದ್ಘಾಟಿಸಿದರು.**

# ಸೂರಗೊಂಡನ ಕೊಪ್ಪದಲ್ಲಿ ಸಂತ ಸೇವಾಲಾಲ್ 285ನೇ ಜಯಂತಿ



» **ದಾವಣಗೆರೆ**

ಸಂತ ಸೇವಾಲಾಲ್ ಮಹಾರಾಜರು ಹುಟ್ಟಿದ ನ್ಯಾಮತಿ ತಾಲ್ಲೂಕಿನ ಸೂರಗೊಂಡನಕೊಪ್ಪದಲ್ಲಿ ಸಂತ ಸೇವಾಲಾಲ್ ಮಹಾರಾಜರ 285 ನೇ ಜಯಂತಿಯನ್ನು ಫೆಬ್ರವರಿ 13 ರಿಂದ 15 ರ ವರೆಗೆ ಆಚರಿಸಲಾಗುತ್ತಿದ್ದು ಇದಕ್ಕೆ ಬೇಕಾದ ಎಲ್ಲಾ ಸಿದ್ದತೆಗಳನ್ನು ಜಿಲ್ಲಾಡಳಿತ ಕೈಗೊಳ್ಳಲಿದೆ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು. ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಂತ ಸೇವಾಲಾಲ್ ಜಯಂತಿಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಂತ ಸೇವಾಲಾಲ್ ಮಹಾರಾಜರು ಹುಟ್ಟಿದ ಕ್ಷೇತ್ರ ಸೂರಗೊಂಡನಕೊಪ್ಪದಲ್ಲಿ ರಾಜ್ಯ ಮಟ್ಟದ ಜಯಂತಿ ಕಾರ್ಯಕ್ರಮವನ್ನು ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ, ಸಂತ ಸೇವಾಲಾಲ್ ಕ್ಷೇತ್ರಾಭಿವೃದ್ಧಿ ಮತ್ತು ನಿರ್ವಹಣಾ ಪ್ರತಿಷ್ಠಾನದ ಸಹಯೋಗದಲ್ಲಿ ಜಯಂತಿಯನ್ನು 3 ದಿನಗಳ ಕಾಲ ಆಚರಿಸಲಾಗುತ್ತದೆ. ಈ ಕಾರ್ಯಕ್ರಮದಲ್ಲಿ ರಾಜ್ಯದ ಇತರೆ ಜಿಲ್ಲೆ ಹಾಗೂ ಹೊರ ರಾಜ್ಯಗಳಿಂದ ಭಕ್ತರು ಆಗಮಿಸಲಿದ್ದು ಶ್ವೇತವಸ್ತ್ರ ಮಾಲಾಧಾರಿಗಳು ಭಾಗವಹಿಸಲಿದ್ದು 3 ಲಕ್ಷಕ್ಕೂ ಹೆಚ್ಚು ಭಕ್ತರು ಈ ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸುವರು. ಲಕ್ಷಾಂತರ ಭಕ್ತಾದಿಗಳು ಭಾಗವಹಿಸುವುದರಿಂದ ಇಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕಾಗಿದೆ. ಆಗಮಿಸುವ ಭಕ್ತಾದಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ, ವಾಹನ ನಿಲುಗಡೆ, ಸುಗಮ ಸಂಚಾರ, ಆರೋಗ್ಯ ಮತ್ತು ನೈರ್ಮಲ್ಯತೆ ಕಾಪಾಡುವುದು, ವೇದಿಕೆ ನಿರ್ಮಾಣ, ಆಸನದ ವ್ಯವಸ್ಥೆ, ಪ್ರಸಾದ ವ್ಯವಸ್ಥೆ ಸೇರಿದಂತೆ ಸ್ನಾನ ಮತ್ತು ಶೌಚಾಲಯದ ವ್ಯವಸ್ಥೆಯನ್ನು ತುಂಬ ಅಚ್ಚುಕಟ್ಟಾಗಿ ನೆರವೇರಿಸಬೇಕಾಗಿದೆ. ಕಾರ್ಯಕ್ರಮವನ್ನು ಅತ್ಯಂತ ಯಶಸ್ವಿಯಾಗಿ ನೆರವೇರಿಸಲು ಅಧಿಕಾರಿಗಳ ನೇತೃತ್ವದಲ್ಲಿ ವಿವಿಧ ಸಮಿತಿಗಳನ್ನು ರಚಿಸಲಾಗುತ್ತದೆ ಎಂದರು. ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳು ಸೇರಿದಂತೆ ರಾಜ್ಯದ ಉಪಮುಖ್ಯಮಂತ್ರಿಯವರು, ಸಚಿವರು, ಗಣ್ಯ ವ್ಯಕ್ತಿಗಳು ಸಹ ಭಾಗವಹಿಸಲಿದ್ದು ಹೆಲಿಪ್ಯಾಡ್ ಸೇರಿದಂತೆ ಶಿಷ್ಟಾಚಾರ ಪಾಲನೆಯ ಉಸ್ತುವಾರಿಗೆ ಅಧಿಕಾರಿಗಳ ತಂಡ ರಚಿಸಲಾಗುತ್ತದೆ ಎಂದರು. ಚಿನ್ನಿಕಟ್ಟೆ ಸೂರಗೊಂಡನಕೊಪ್ಪ ಸೇವಾಲಾಲ್ ರವರ ಜನ್ಮಸ್ಥಳವಾಗಿದ್ದು ನೂರಾರು ಕಿ.ಮಿ. ದೂರದಿಂದ ಬರಿಗಾಲಲ್ಲಿ ಬಂದು ತಮ್ಮ ಭಕ್ತಿ ಸಮರ್ಪಿಸುವರು.

## ಪ್ರಮುಖ ಸುದ್ದಿ

# ಫೋರ್ಟಿಸ್ ಆಸ್ಪತ್ರೆಯಲ್ಲಿ ಮೊಣಕಾಲು ಯಶಸ್ವಿ ಶಸ್ತ್ರಚಿಕಿತ್ಸೆ

» **ಚಿತ್ರದುರ್ಗ**

ಬೆಂಗಳೂರಿನ ಬನ್ನೇರುಘಟ್ಟ ರಸ್ತೆಯಲ್ಲಿರುವ ಫೋರ್ಟಿಸ್ ಆಸ್ಪತ್ರೆಯಲ್ಲಿ ಚಿತ್ರದುರ್ಗದ 60 ವರ್ಷದ ಮಹಿಳೆಗೆ ಮ್ಯಾಕೋ ರೋಬೋಟಿಕ್ ಸರ್ಜರಿ ಮೂಲಕ ಮೊಣಕಾಲು ಬದಲಿ ಯಶಸ್ವಿ ಶಸ್ತ್ರಚಿಕಿತ್ಸೆಯನ್ನು ಯಶಸ್ವಿಯಾಗಿ ಮಾಡಲಾಗಿದೆ. ಮ್ಯಾಕೋ ರೋಬೋಟಿಕ್ ಆರ್ಮ್-ಅಸಿಸ್ಟೆಡ್ ಶಸ್ತ್ರಚಿಕಿತ್ಸೆಯ ಮೂಲಕ ಹೊಸ ಜೀವನ ನೀಡಿದೆ. ಅವರು ಈಗ ಎಂದಿನಂತೆ ಓಡಾಡುತ್ತಾ ತಮ್ಮ ಕೆಲಸವನ್ನು ಅವರೆ ಮಾಡಿಕೊಳ್ಳುತ್ತಿದ್ದಾರೆ ಎಂದು ಫೋರ್ಟಿಸ್ ಆಸ್ಪತ್ರೆಯ ಮೂಳೆಚಿಕಿತ್ಸಾ ವಿಭಾಗದ ಸಲಹೆಗಾರ ಡಾ. ನವೀನ್ ತಿಳಿಸಿದರು.

ನಗರದ ಹೋಟೇಲ್‌ವೊಂದರಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೂರು ವರ್ಷಗಳ ಹಿಂದೆ, ಚಿತ್ರದುರ್ಗದ 60 ವರ್ಷದ ಜಯಮ್ಮ ಅವರು ಮೊಣಕಾಲು ನೋವನ್ನು




ಅನುಭವಿಸಲು ಪ್ರಾರಂಭಿಸಿದರು, ಬಳಿಕ ಆಸ್ಪತ್ರೆಗೆ ತೋರಿಸಿದಾಗ ಅವರಿಗೆ ಎರಡು ಮೊಣಕಾಲುಗಳ ಅಸ್ಥಿಸಂಧಿವಾತದಿಂದ ಬಳಲುತ್ತಿರುವುದು ತಿಳಿದು ಬಂತು, ಇದು ಮೂಳೆಕಾರ್ಟಿಲೆಜ್‌ಕ್ಷೀಣಿಸಿ,ಮೊಣಕಾಲಿನ ಮೂಳೆಯಿಂದ ಮೂಳೆಗೆ ಘರ್ಷಣೆಯನ್ನು ಉಂಟುಮಾಡುತ್ತದೆ. ಆಕೆಗೆ ಮೊಣಕಾಲು ಬದಲಿ ಶಸ್ತ್ರಚಿಕಿತ್ಸೆಗೆ ಒಳಗಾಗಲು ಸಲಹೆ ನೀಡಲಾಯಿತು. ಆದಾಗ್ಯೂ, ಚಿತ್ರದುರ್ಗದಲ್ಲಿ ಅನೇಕ ವೈದ್ಯರನ್ನು ಸಂಪರ್ಕಿಸಿದರೂ, ಶಸ್ತ್ರಚಿಕಿತ್ಸೆಯೊಂದಿಗೆ ಮುಂದುವರಿಯಲು ಆಕೆಗೆ ಆತ್ಮವಿಶ್ವಾಸ ಮತ್ತು ಸರಿಯಾದ ಮಾಹಿತಿಯನ್ನು ಸಂಗ್ರಹಿಸಲು ಸಾಧ್ಯವಾಗಲಿಲ್ಲ ಎಂದರು.

ಅವರ ಸ್ಥಿತಿಯು ವಿಶೇಷವಾಗಿ ಮೊಣಕಾಲು ಮಡಿಚಿ ಕುಳಿತುಕೊಳ್ಳುವಾಗ ಅಥವಾ ಜೋರಾಗಿ ನಡೆಯುವಾಗ ಹೆಚ್ಚಾಗಿ ನೋವು ಕಾಣಿಸಿಕೊಳ್ಳುತ್ತಿತ್ತು. ಇದು ಅವರ ದೈನಂದಿನ ಜೀವನದ ಮೇಲೆ ಗಮನಾರ್ಹವಾಗಿ ಪರಿಣಾಮ ಬೀರಲು ಪ್ರಾರಂಭಿಸಿತು.ಡಾ. ನವೀನ್ ಸಾಂಪ್ರದಾಯಿಕ ಮತ್ತು ರೊಬೊಟಿಕ್ ಶಸ್ತ್ರಚಿಕಿತ್ಸೆಯ ಆಯ್ಕೆಯ ಬಗ್ಗೆ ಸಂಪೂರ್ಣವಾಗಿ ವಿವರಿಸಿದರು, ಜಯಮ್ಮ ತಿಳುವಳಿಕೆಯುಳ್ಳ ನಿರ್ಧಾರವನ್ನು ತೆಗೆದುಕೊಳ್ಳಲು ಅವಕಾಶ ಮಾಡಿಕೊಟ್ಟರು. ಸಾಂಪ್ರದಾಯಿಕ ವಿಧಾನಕ್ಕಿಂತ ಅದರ ಅನುಕೂಲಗಳನ್ನು ಪರಿಗಣಿಸಿ ಅವರು ನಂತರ ರೋಬೋಟಿಕ್ ಶಸ್ತ್ರಚಿಕಿತ್ಸೆ ಆರಿಸಿಕೊಂಡರು.ರೋಗಿಯ ಅಧಿಕ ರಕ್ತದೊತ್ತಡದ ಇತಿಹಾಸವನ್ನು ಗಮನದಲ್ಲಿಟ್ಟುಕೊಂಡು,ಹೃದ್ರೋಗ ತಜ್ಞರು ಮತ್ತು ಸೂಕ್ತ ವೈದ್ಯರ ಸಲಹೆಯನ್ನು ಪಡೆದು ಆಕೆಯ ಶಸ್ತ್ರಚಿಕಿತ್ಸಾ ಸಾಮರ್ಥ್ಯವನ್ನು ತಿಳಿದುಕೊಂಡೆವು ಎರಡೂ ಮೊಣಕಾಲು ಶಸ್ತ್ರಚಿಕಿತ್ಸೆಗಳನ್ನು ಮ್ಯಾಕೊ ರೋಬೋಟಿಕ್ ತಂತ್ರಜ್ಞಾನದ ಮೂಲಕ ಒಂದೇ ದಿನದಲ್ಲಿ ನಡೆಸಲಾಯಿತು.ಇದು ರೋಗಿಯ ರೋಗಿಯ ಮೊಣಕಾಲುಗಳ ಅಭೂತಪೂರ್ವ ನಿಖರತೆಯೊಂದಿಗೆ 3ಆ ವರ್ಚುವಲ್ ಮಾದರಿಯನ್ನು ತೋರಿಸಲಿದ್ದು, ಈ ಮೂಲಕ ನೂಕ್ತರೀತಿಯಲ್ಲಿ ಶಸ್ತ್ರಚಿಕಿತ್ಸೆ ನಡೆಸಲು ಸಹಕಾರಿಯಾಯಿತು. ಸಾಂಪ್ರದಾಯಿಕ ಮೊಣಕಾಲು ಮತ್ತು ಸೊಂಟ ಬದಲಿ ಶಸ್ತ್ರಚಿಕಿತ್ಸೆಗಳು ಕಳೆದ ಮೂರು ದಶಕಗಳಿಂದ ರೋಗಿಗಳ ಜೀವನದ ಗುಣಮಟ್ಟವನ್ನು ಹೆಚ್ಚಿಸಿವೆ. ಆದಾಗ್ಯೂ, ಮ್ಯಾಕೋ ತಂತ್ರಜ್ಞಾನವು ಗಣನೀಯವಾಗಿ ನಿಖರತೆಯನ್ನು ಹೆಚ್ಚಿಸುವ ಮೂಲಕಈ ಕ್ಷೇತ್ರದಲ್ಲಿ ಕ್ರಾಂತಿಗೊಳಿಸಿದೆ, ಅಷ್ಟೇ ಅಲ್ಲದೆ, ಮೂಳೆ ಮತ್ತು ಮೃದು ಅಂಗಾಂಶವನ್ನು ಸಂರಕ್ಷಿಸಲು ಸಹ ಸಹಾಯ ಮಾಡುತ್ತದೆ ಎಂದರು.ರೋಗಿ ಜಯಮ್ಮ ಮಾತನಾಡಿ, ರೊಬೊಟೆಕ್ ಸರ್ಜರಿಯಿಂದ ನನಗೆ ಹೊಸ ಜೀವನವನ್ನು ನೀಡಿದೆ. ನೋವಿನಿಂದ ನನ್ನನ್ನು ಮುಕ್ತಗೊಳಿಸಿದ್ದು ನಾನು ಎಂದಿನಂತೆ ಜೀವನ ನಡೆಸಲು ಸಹಕಾರಿ ಮಾಡಿದೆ ಎಂದು ತಮ್ಮ ಅನುಭವ ಹಂಚಿಕೊಂಡರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T